ಸಂಪುಟ : 10 ಸಂಚಿಕೆ: 106 ಪುಟ : 4+2 ಬೆಲೆ: 3.00 ಬುಧವಾರ ಮೇ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 106 Pages : 4+2 Price : 3.00 Wednesday May 28 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಜಿಲ್ಲಾಡಳಿತ ಸಭಾಂಗಣದಲ್ಲಿ ಕೋವಿಡ್ ಮುಂಜಾಗೃತಾ ಸಭೆ ಜರುಗಿಸಿದ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ**

# ಕೋವಿಡ್ ಭಯ ಬಿಡಿ, ಎಚ್ಚರಿಕೆಯಿರಲಿ



> ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾಲಕಾಲಕ್ಕೆ ನೀಡುವ ಮಾರ್ಗಸೂಚಿಗಳ ಪಾಲನೆ ಕಡ್ಡಾಯ. ಸದ್ಯಕ್ಕೆ ಅಂತಹ ತುರ್ತು ಇಲ್ಲದಿದ್ದರೂ ವೆಂಟಿಲೇಟರ್, ಆಕ್ಸಿಜನ್, ಔಷಧ ಸೇರಿ ಎಲ್ಲವನ್ನೂ ವ್ಯವಸ್ಥೆ ಮಾಡಿಕೊಳ್ಳಬೇಕು. ಆಸ್ಪತ್ರೆಗಳಲ್ಲಿ ಅಗತ್ಯ ಮೂಲಸೌಕರ್ಯ ಕಡ್ಡಾಯವಾಗಿ ಇರುವಂತೆ ಕ್ರಮ ಕೈಗೊಳ್ಳಬೇಕು.
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಕೋವಿಡ್ ಬಗ್ಗೆ ಆತಂಕಪಡುವ ಪರಿಸ್ಥಿತಿ ನಿರ್ಮಾಣವಾಗಿಲ್ಲ. ಆದರೂ, ಕೋವಿಡ್ ಕುರಿತು ಮುಂಜಾಗ್ರತೆ ವಹಿಸಬೇಕು. ಜನರಲ್ಲಿ ಭಯ ಬೇಡ, ಜಾಗೃತಿ ಇರಲಿ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಸೂಚನೆ ನೀಡಿದರು.

> ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಸಾರ್ವಜನಿಕರಲ್ಲಿ ಕೋವಿಡ್ ಸೋಂಕಿನ ಕುರಿತು ಜಾಗೃತಿ ಮೂಡಿಸಬೇಕು. ಗರ್ಭಿಣಿಯರಲ್ಲಿ ಆರೋಗ್ಯ ಸಮಸ್ಯೆ ಕಂಡುಬಂದರೆ, ಅವರನ್ನು ಒಂದು ಆಸ್ಪತ್ರೆಯಿಂದ ಮತ್ತೊಂದು ಆಸ್ಪತ್ರೆಗೆ ವರ್ಗಾಯಿಸುವುದನ್ನು ನಿಲ್ಲಿಸಿ, ಎಲ್ಲ ಆಸ್ಪತ್ರೆಗಳಲ್ಲೂ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಲು ಸಲಹೆ ಮಾಡಿದರು.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಕೋವಿಡ್ ಮುಂಜಾಗೃತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಯಸ್ಸಾದವರು, ಗರ್ಭಿಣಿಯರು, ಹೃದಯ ಸಂಬಂಧಿ, ಶ್ವಾಸಕೋಶ ಸಮಸ್ಯೆ ಇರುವವರು ಮುನ್ನೆಚ್ಚರಿಕೆ ಕ್ರಮವಾಗಿ ಮಾಸ್ಕ್ ಧರಿಸುವಂತೆ ಅರಿವು ಮೂಡಿಸಬೇಕು. ಪ್ರತೀ ವಾರಕ್ಕೊಮ್ಮೆ ಕೋವಿಡ್ ಹರಡುವಿಕೆ ಪರಿಸ್ಥಿತಿಯ ಪರಿಶೀಲನೆಯನ್ನು ಜಿಲ್ಲಾಡಳಿತ ನಡೆಸುತ್ತಾ ತೀವ್ರ ನಿಗಾ ಇಡಬೇಕು. ಶೀತ, ನೆಗಡಿ, ಜ್ವರ ಇರುವ ಮಕ್ಕಳನ್ನು ಪಾಲಕರು ಗಮನಿಸಿ ಸೂಕ್ತ ಚಿಕಿತ್ಸೆ ಕೊಡಿಸಬೇಕು. ರೋಗ ಲಕ್ಷಣ ಇರುವ ಮಕ್ಕಳನ್ನು ಶಾಲೆಗೆ ಕಳುಹಿಸದಿರುವುದು ಸೂಕ್ತ. ಶಾಲೆಗಳೂ ಈ ಬಗ್ಗೆ ಗಮನ ಹರಿಸಿ ಶೀತ, ನೆಗಡಿ ಇರುವ ಮಕ್ಕಳ ಕುರಿತು ಪಾಲಕರಿಗೆ ಮಾಹಿತಿ ನೀಡಬೇಕು ಎಂದು ಎಚ್.ಕೆ. ಪಾಟೀಲ ತಿಳಿಸಿದರು.

ಕೋವಿಡ್‌ನ ಎಂತಹುದೇ ಪರಿಸ್ಥಿತಿ ಎದುರಿಸಲು ಸರ್ವ ಸನ್ನದ್ಧವಾಗಿರಿ. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಪರಿಸ್ಥಿತಿ ಎದುರಿಸಿ. ಆಸ್ಪತ್ರೆಗಳಲ್ಲಿ ಹಾಸಿಗೆ, ಆಕ್ಸಿಜನ್ ವೆಂಟಿಲೇಟರ್ ಸೇರಿದಂತೆ ಮೂಲಭೂತ ಸೌಕರ್ಯಗಳು ಕಡ್ಡಾಯವಾಗಿರುವಂತೆ ನೋಡಿಕೊಳ್ಳಿ. ಬಾಣಂತಿ ಹಾಗೂ ಮಕ್ಕಳ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಿ. ಜಿಲ್ಲಾ ಆಸ್ಪತ್ರೆಗಳೂ ಸೇರಿದಂತೆ ಎಲ್ಲ ಆಸ್ಪತ್ರೆಗಳು ಕೊವಿಡ್ ಸೋಂಕಿತರ ಆರೈಕೆಗೆ ಸರ್ವ ಸನ್ನದ್ಧವಾಗಿ ಇರುವಂತೆ ಸಚಿವರು ಸೂಚಿಸಿದರು.

ನೆರೆಯ ರಾಜ್ಯಗಳಾದ ಕೇರಳದಲ್ಲಿ–95, ತಮಿಳುನಾಡಿನಲ್ಲಿ–66, ಮಹಾರಾಷ್ಟ್ರದಲ್ಲಿ–56 ಪ್ರಕರಣಗಳು ವರದಿಯಾಗಿವೆ. ಗದಗ ಜಿಲ್ಲೆಯಲ್ಲಿ ಕೋವಿಡ್ ಪ್ರಕರಣ ವರಿಯಾಗದಿದ್ದರೂ ಸಹ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡದೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಿ ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ತಾಲೂಕು ಹಂತದಲ್ಲಿ ಸಭೆ ಜರುಗಿಸಿ ಕೋವಿಡ್ ನಿಯಂತ್ರಣ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಿ, ಕೊವಿಡ್ ಮಾರ್ಗಸೂಚಿ ಪಾಲನೆ ಎಲ್ಲರ ಹೊಣೆ ಎಂದರು.

ಸಭೆಯಲ್ಲಿ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಡಿಎಚ್‌ಒ ಡಾ. ಎಸ್.ಎಸ್. ನೀಲಗುಂದ ಅವರುಗಳು ಸಭೆಗೆ ಕೋವಿಡ್ ನಿಯಂತ್ರಣಕ್ಕಾಗಿ ಮಾಡಲಾದ ಸಿದ್ಧತೆ, ಅನುಸರಿಸುವ ಕ್ರಮಗಳ ಮಾಹಿತಿ ಒದಗಿಸಿದರು.

ಸಭೆಯಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ನಗರಾಭಿವೃದ್ಧಿ ಕೋಷದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರೆಗೌಡ್ರ, ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಸೀಲ್ದಾರರು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಜರಿದ್ದರು.

## ಉಚಿತ ವೃತ್ತಿ ತರಬೇತಿಗಳು ಆರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

SBI-ASF ಈ ಆರ್‌ಸೆಟಿ (ಗಿಟ್‌ಸರ್ಡ್) (ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ ಗದಗ) ಮತ್ತು ಅಗ್ರಿಕಲ್ಚರಲ್ ಸೈನ್ಸ್ ಫೌಂಡೇಶನ್ ಹುಲಕೋಟಿ, ಇವುಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಊಟ–ವಸತಿಯೊದಿಗೆ 1. ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿ 2. ಅಣಬೆ ತಯಾರಿಕೆ ತರಬೇತಿ 3. ಕುರಿ ಸಾಕಾಣಿಕೆ ತರಬೇತಿ 4.ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಈ ಉಚಿತ ತರಬೇತಿಗಳನ್ನು ಜೂನ್ ಮತ್ತು ಜುಲೈ ತಿಂಗಳು 2025ರ ಆರಂಭಿಸಲಾಗುವುದು,

ಆದ್ದರಿಂದ ಆಸಕ್ತರು, ನಿರುದ್ಯೋಗಿಗಳು, ಯುವಕ/ಯುವತಿಯರು, ಪುರುಷರು, ಮಹಿಳೆಯರು, ಸ್ವ ಸಹಾಯ ಗುಂಪಿನವರು ಮತ್ತು ಯಾವುದೇ ಸಾಮಾನ್ಯ ಜನರು 19 ರಿಂದ 44 ವಯಸ್ಸಿನೊಳಗಿನ ಗ್ರಾಮೀಣ ಭಾಗದವರಿಗೆ ಅರ್ಜಿ ಆಹ್ವಾನಿಸಿದೆ. ಈ ತರಬೇತಿಗಳು ಊಟ, ವಸತಿಯೊಂದಿಗೆ ಉಚಿತವಾಗಿರುತ್ತದೆ, ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣ ಪತ್ರ ಕೊಡಲಾಗುವುದು, ತರಬೇತಿ ಪಡೆದವರಿಗೆ ಬ್ಯಾಂಕ್ ಸಾಲ ಮಾಡಿಸಿಕೊಡಲಾಗುವುದು. ಆಸಕ್ತರು ಎಸ್.ಬಿ.ಆಯ್ ಆರ್‌ಸೆಟಿ ಹುಲಕೋಟಿ ಗದಗ ಸಂಸ್ಥೆಯಲ್ಲಿ ದೊರೆಯುವ ಅರ್ಜಿ ಫಾರಂನಲ್ಲಿ ತುಂಬಿ ನಿರ್ದೇಶಕರು SBI-ASFಆ ಈ ಆರ್,ಸೆಟಿ ಸಂಸ್ಥೆ ಹುಲಕೋಟಿ ಗದಗ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ ಗದಗ. ಇವರಿಗೆ ಅರ್ಜಿ ಸಲ್ಲಿಸಬೇಕು, ಅಥವಾ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ–8880169996/9632287949 ಸಂಪರ್ಕಿಸಲು ಕೋರಲಾಗಿದೆ.

**ಉತ್ಖನನ ಕಾಮಗಾರಿಗೆ ಚಾಲನೆ ನೀಡಲಿರುವ ಸಿಎಂ । ಪೂರ್ವ ಸಿದ್ಧತೆಗೆ ಸಾಮಾನ್ಯ ಸಭೆಯಲ್ಲಿ ಚರ್ಚೆ**

# ಜೂ.3ಕ್ಕೆ ಸಿ.ಎಂ ಸಿದ್ದರಾಮಯ್ಯ ಲಕ್ಕುಂಡಿಗೆ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

101 ಗುಡಿ, 101 ಬಾವಿಗಳನ್ನು ಪತ್ತೆ ಹಚ್ಚುವ ಉತ್ಖನನ ಕಾಮಗಾರಿಗೆ ಚಾಲನೆ ನೀಡಲು ಐತಿಹಾಸಿಕ ಲಕ್ಕುಂಡಿ ಗ್ರಾಮಕ್ಕೆ ಜೂನ್ 3ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಲಿದ್ದಾರೆ. ಈ ಕುರಿತು ಇಲ್ಲಿಯ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲು ಸುದೀರ್ಘವಾಗಿ ಚರ್ಚೆ ನಡೆಸಲಾಯಿತು.

ಇಲ್ಲಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಉತ್ಖನನ ಕಾಮಗಾರಿಗೆ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ. ಬಜೆಟ್‌ನಲ್ಲಿ ಘೋಷಿಸಿರುವಂತೆ ಬಯಲು ವಸ್ತು ಸಂಗ್ರಾಲಯದ ಭೂಮಿ ಪೂಜೆ, ಕಾಶಿ ವಿಶ್ವನಾಥ, ನನ್ನೇಶ್ವರ ದೇಗುಲ ಹಾಗೂ ಜಂತ್ಲಿ ಶಿರೂರ ರಸ್ತೆಯಲ್ಲಿಯ ಐತಿಹಾಸಿಕ ಕಲ್ಮಠದ ಅಭಿವೃದ್ಧಿ ಕಾಮಗಾರಿಯನ್ನು ವೀಕ್ಷಿಸಲಿದ್ದಾರೆ ಎಂದು ಲಕ್ಕುಂಡಿ ಪ್ರಾದೇಶಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಸಭೆಗೆ ತಿಳಿಸಿ ಗ್ರಾಮದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಲು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾಮದ ನೈರ್ಮಲ್ಯ ಕಾಪಾಡಿಕೊಂಡು ಗ್ರಾಮಸ್ಥರ ಸಹಾಯ ಸಹಕಾರದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಗವುದು ಎಂದು ಭರವಸೆ ನೀಡಿದರು.

ಕಳೆದ ಮೂರು ವರ್ಷಗಳಿಂದ ಗ್ರಾಮದಲ್ಲಿ ಜೆ.ಜೆ.ಎಂ ಕಾಮಗಾರಿ ಸೇರಿದಂತೆ ಇತರೆ ಕಾಮಗಾರಿಗಳು ಅಪೂರ್ಣಗೊಂಡು ಗ್ರಾಮಸ್ಥರಿಗೆ ಕುಡಿಯುವ ನೀರಿನ ತೊಂದರೆಯಾಗಿದೆ. ಆದ್ದರಿಂದ ಮುಂದಿನ 15 ದಿನಗಳ ಒಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸದಿದ್ದರೆ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಶಿಫಾರಸು ಮಾಡಲು ತೀರ್ಮಾನಿಸಲಾಗಿದೆ ಎಂದು ಪಿ.ಡಿ.ಒ ಅಮೀರನಾಯಕ ತಿಳಿಸಿದರು.




> ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಲಕ್ಕುಂಡಿ ಗ್ರಾಮವನ್ನು ಪ್ಲಾಸ್ಟಿಕ್ ಮುಕ್ತ ಗ್ರಾಮವನ್ನಾಗಿ ಮಾಡಲು ಮನೆ ಮನೆಗೆ ತೆರಳಿ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಲು ವಿನಂತಿಸಿ, 1 ಕೆ.ಜಿ ಪ್ಲಾಸ್ಟಿಕ್ ತಂದುಕೊಟ್ಟವರಿಗೆ 2 ಕೆ.ಜಿ ಸಕ್ಕರೆಯನ್ನು ಕೊಡಲಾಗುವುದು. ಸ್ವಚ್ಛ ಭಾರತ ಯೋಜನೆಯಡಿ ಬಾಕಿ ಇರುವ 350 ಮನೆಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಿಸಲು ಜಾಗೃತಿ ಮೂಡಿಸುವುದು, ತ್ಯಾಜ್ಯ ವಸ್ತುಗಳ ವಿಲೇವಾರಿ ಘಟಕವನ್ನು ಆರಂಭಿಸುವುದು, ಒಣ ಕಸವನ್ನು ಸಂಗ್ರಹಿಸಿ ವಿಲೇವಾರಿ ವಾಹನದಲ್ಲಿ ಹಾಕಲು ಜಾಗೃತಿ ಮೂಡಿಸುವ ಕುರಿತು ಚರ್ಚೆ ನಡೆಯಿತು.

ಮನೇರೆಗಾ ಕಾಮಗಾರಿಯಲ್ಲಿ ಕ್ರಿಯಾ ಯೋಜನೆಯಂತೆ 27400 ಮಾನವ ದಿನಗಳ ಗುರಿಯನ್ನು ತಲುಪಲಾಗಿದ್ದು, ಸಹಕಾರ ನೀಡಿದ ಕೂಲಿ ಕಾರ್ಮಿಕರಿಗೆ, ಸಿಬ್ಬಂದಿ ವರ್ಗವನ್ನು ಅಭಿನಂದಿಸಲಾಯಿತು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಕಾರ್ಯದರ್ಶಿ ಪ್ರದೀಪ ಆಲೂರ, ಎಸ್.ಡಿ.ಎ ಎಂ.ಎ. ಗಾಜಿ, ಗ್ರಾ.ಪಂ. ಸದಸ್ಯರು ಹಾಜರಿದ್ದರು.

## ತ್ಯಾಜ್ಯ ಸಾಗಾಟ ವಾಹನ ಲೋಕಾರ್ಪಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ನಗರಸಭೆಯಿಂದ ನಗರದ ಸ್ವಚ್ಛತೆಗಾಗಿ ತ್ಯಾಜ್ಯ ಸಾಗಾಟದ ಟ್ರ್ಯಾಕ್ಟರ್ ಟ್ರೇಲರ್, ಮನೆ ಮನೆ ತ್ಯಾಜ್ಯ ಸಂಗ್ರಹಣೆಗೆ ಮಿನಿ ಟಿಪ್ಪರ್ ವಾಹನಗಳನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಮಂಗಳವಾರ ಲೋಕಾರ್ಪಣೆಗೊಳಿಸಿದರು.

ನಗರಸಭೆ ಆವರಣದಲ್ಲಿ ನಗರಸಭೆ ಕಾರ್ಯಾಲಯದ ಸನ್ 2024/25ನೇ ಸಾಲೀನ 15ನೇ ಹಣಕಾಸು ನಿರ್ಬಂಧಿತ ಯೋಜನೆಯ ಅವನುದಾನದಲ್ಲಿ ಒಟ್ಟು ಅಂದಾಜು 1 ಕೋಟಿ ವೆಚ್ಚದಲ್ಲಿ ಖರೀದಿಸಲಾದ ತ್ಯಾಜ್ಯ ಸಾಗಾಟದ 4 ಟ್ರ್ಯಾಕ್ಟರ್ ಟ್ರೇಲರ್, ಮನೆ ಮನೆ ತ್ಯಾಜ್ಯ ಸಂಗ್ರಹಣೆಗೆ 6 ಮಿನಿ ಟಿಪ್ಪರ್ ವಾಹನಗಳನ್ನು ವಾಹನಗಳನ್ನು ಲೋಕಾರ್ಪಣೆ ಮಾಡಿದರು. ಇದೇ ಸಂದರ್ಭದಲ್ಲಿ ನಗರಸಭೆಯಿಂದ ಬಿ ಖಾತಾ ಉತಾರಗಳನ್ನು ಸಾಂಕೇತಿಕವಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಫಲಾನುಭವಿಗಳಿಗೆ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಸಿದ್ದು ಪಾಟೀಲ, ಪ್ರಭು ಬುರಬುರೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ ಸೇರಿದಂತೆ ನಗರಸಭೆ ಸದಸ್ಯರು ಹಾಜರಿದ್ದರು.

## ನೇರ ಸಂದರ್ಶನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ನೇರ ಸಂದರ್ಶನವಿದ್ದು ದಿನಾಂಕ: 30–05–2025, ಶುಕ್ರವಾರದಂದು ಬೆಳಿಗ್ಗೆ 10–00 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೂಂ.ನಂ: 215, ಜಿಲ್ಲಾ ಆಡಳಿತ ಭವನ ಗದಗ, ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಸದರಿ ನೇರ ಸಂದರ್ಶನದಲ್ಲಿ ಈ ಕೆಳಗಿನ ಕಂಪನಿಗಳು ಭಾಗವಹಿಸಲಿವೆ.

ದೇಸಾಯಿ ಆಟೋಮೋಟಿವ್ ಲಿಮಿಟೆಡ್, ಗದಗ ವಿದ್ಯಾರ್ಹತೆ ಪಿ,ಯು.ಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ. ಹುದ್ದೆ ಸೇಲ್ಸ್ ಎಕ್ಸಿಕ್ಯೂಟಿವ್ ಮತ್ತು ಸರ್ವಿಸ್ ವಿಭಾಗ ವಯಸ್ಸು 21 ರಿಂದ 30 (ಪುರುಷ ಅಬ್ಯರ್ಥಿಗಳು ಮಾತ್ರ) ಕೆಲಸದ ಸ್ಥಳ ಗದಗ, ಗಜೇಂದ್ರಗಡ, ರೋಣ, ಲಕ್ಷ್ಮೇಶ್ವರ. ಜೆ.ಕೆಟರ್ಸ್ & ಇಂಡಸ್ಟ್ರೀಸ್ ಲಿಮಿಟೆಡ್, ಮೈಸೂರು. ವಿದ್ಯಾರ್ಹತೆ ಎಸ್.ಎಸ್.ಎಲ್,ಸಿ, ಪಿ,ಯು.ಸಿ, ಐಟಿಐ, ಡಿಪ್ಲೋಮಾ. ಹುದ್ದೆ ನ್ಯಾಪ್ಸ್ ಟ್ರೇನಿ, ವಯಸ್ಸು 18 ರಿಂದ 34 ( ಪುರುಷ ಅಬ್ಯರ್ಥಿಗಳು ಮಾತ್ರ ) ಕೆಲಸದ ಸ್ಥಳ : ಮೈಸೂರು.

ನೇರ ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕ ಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮ್(ಬಯೋಡಾಟಾ) ಪ್ರತಿಗಳು, ಮತ್ತು ಆಧಾರ್ ಕಾರ್ಡ್ ಝೆರಾಕ್ಸ್‌ನೊಂದಿಗೆ ಭಾಗವಹಿಸಬಹುದು.

ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಕಚೇರಿ ದೂರವಾಣಿ ಸಂಖ್ಯೆ, 6363330688, 08372–220609 ಕ್ಕೆ ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂದರ್ಶನದ ದಿನದಂದೇ ಮಾಡಿಸಬೇಕಾಗಿರುತ್ತದೆ.



ಗದಗ ನಗರದ ಭೀಷ್ಮವಿಹಾರ ಧಾಮದಲ್ಲಿ ಮಂಗಳವಾರ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸ್ಪೀಡ್ ಬೋಟಗೆ ಚಾಲನೆ ನೀಡಿದರು. ಸ್ಪೀಡ್ ಬೋಟ್ ಮೂಲಕ ಭೀಷ್ಮ ಕೆರೆಯ ಪರ್ಯಟನೆ ಮಾಡಿದ ಎಚ್.ಕೆ. ಪಾಟೀಲ ಸಂತಸ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ ಉಪಸ್ಥಿತರಿದ್ದರು.

## ರಾಜ್ಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಶ್ರೀ ಗುರುಕುಲ ಯೋಗ ವಿದ್ಯಾ ಕೇಂದ್ರ ಮತ್ತು ಶಿವಮೊಗ್ಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಸಾಗರ ಇವರುಗಳ ಸಹಯೋಗದಲ್ಲಿ ಜೂನ್ 7 ಮತ್ತು 8ರಂದು ಸಾಗರದ ಈಡಿಗರ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗಳನ್ನು ಆಯೋಜಿಸಿದೆ. ಸ್ಪರ್ಧೆಗಳು ಸ್ಪರ್ಧಿಗಳ ವಯೋಮಿತಿ ಆಧಾರದ ಮೇಲೆ ಬಾಲಕ–ಬಾಲಕಿ, ಪುರುಷ–ಸ್ತ್ರೀಯರಿಗಾಗಿ ಪ್ರತ್ಯೇಕವಾಗಿ ನಡೆಯುವವು. ಸ್ಪರ್ಧೆಯಲ್ಲಿ ಭಾಗವಹಿಸಿದ ಸ್ಪರ್ಧಿಗಳು ಸ್ಪರ್ಧಾ ಸಮಯದಲ್ಲಿ ಸ್ಪರ್ಧೆಗಳ ಪಠ್ಯಕ್ರಮದಂತೆ 10 ಆಸನಗಳನ್ನು ಪ್ರದರ್ಶಿಸಬೇಕು.

ಸ್ಪರ್ಧೆಯಲ್ಲಿ ಭಾಗವಹಿಸಿದ ಸ್ಪರ್ಧಿಗಳಿಗೆ, ತರಬೇತುದಾರರಿಗೆ, ನಿರ್ಣಾಯಕರಿಗೆ ಸ್ಪರ್ಧೆ ದಿನಗಳಂದು ಊಟ ಮತ್ತು ವಸತಿ ವ್ಯವಸ್ಥೆ ಇರುವುದು. ▶▶ 3ನೇ ಪುಟಕ್ಕೆ

## ದಿಲೀಪ್‌ಕುಮಾರ ಧೋಕಾರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರಮಣ ಮಾರ್ಗ (ಸ್ವಯಂ ಮಾರ್ಗ) ಅಳವಡಿಸಿಕೊಂಡು ದೀಕ್ಷೆ ಪಡೆಯಲಿರುವ ನಿಮಿತ್ತ ದಿಲೀಪ್‌ಕುಮಾರ ಜಿ.ಧೋಕಾ ಅವರನ್ನು ಗದಗ ನಗರದ ಅಬ್ಬಿಗೇರಿಯಲ್ಲಿರುವ ಶ್ರೀ ವರ್ಧಮಾನ ಸ್ಥಾನಿಕವಾಸಿ ಜೈನ್ ಸಂಘದ ಭವನದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಎಂ.ಫಾರ್ಮ್ ಪದವಿ ಪಡೆದಿರುವ ದಿಲೀಪ್‌ಕುಮಾರ ಜಿ. ಧೋಕಾ ಅನೇಕ ಭಾಷೆಗಳ ಸಂಸ್ಕೃತಿಗಳಲ್ಲಿ ಮತ್ತು ಹಲವಾರು ಕಲೆಗಳಲ್ಲಿ ಆಸಕ್ತಿ ಹೊಂದಿದ್ದು, 35 ವರ್ಷಗಳಿಗಿಂತಲೂ ಹೆಚ್ಚು ಕಾಲ ಔಷಧೋದ್ಯಮದಲ್ಲಿ ಸೇವೆ ಸಲ್ಲಿಸಿದ್ದಾರೆ. ಸಮಾಜ ಸೇವೆಗಾಗಿ ಸ್ವ-ಇಚ್ಛೆಯಿಂದ ರಾಯಚೂರಿನಲ್ಲಿ ಜೂನ್ 11ರಂದು ಶ್ರಮಣ ಮಾರ್ಗ (ಸ್ವಯಂ ಮಾರ್ಗ) ಅಳವಡಿಸಿಕೊಂಡು ದೀಕ್ಷೆ ಪಡೆಯಲಿದ್ದಾರೆ. ಈ ನಿಮಿತ್ತ ಶ್ರೀಯುತರನ್ನು ಗದಗ ಎ.ಪಿ.ಎಂ.ಸಿ. ವಾಕಿಂಗ್ ಮಿತ್ರರ ಸಂಘದಿಂದ ಗೌರವಿಸಿ ಅವರ ಆಶೀರ್ವಾದ ಪಡೆಯಲಾಯಿತು.

ಈ ಸಂದರ್ಭದಲ್ಲಿ ಚನ್ನವೀರಪ್ಪ ಹುಣಸಿಕಟ್ಟಿ, ತಾತನಗೌಡ ಪಾಟೀಲ, ಮಧುಸೂದನ ಪುಣೇಕರ, ಸಂಜಯ ಬಾಗಮಾರ, ಸಿದ್ಧಣ್ಣ ಹಲವಾಗಲಿ, ಸಿದ್ಧಣ್ಣ ಮುನವಳ್ಳಿ, ಉಮೇಶ ನಾಲ್ವಾಡ, ಮಹಾಂತೇಶಗೌಡ ಪಾಟೀಲ, ಪ್ರಕಾಶ ಉಗಲಾಟದ, ಸುರೇಶ ರಡ್ಡೇರ, ಪಂಕಜ ಬಾಫಣಾ, ಜಯಂತಿಲಾಲ ಕವಾಡ, ಶಂಕ್ರಣ್ಣ ಶಿವನಗುತ್ತಿ, ರಾಜಣ್ಣ ಮಲ್ಲಾಡದ, ವಿಜಯಕುಮಾರ ಶಿವಪ್ಪಗೌಡ್ರ, ರಮೇಶ ಶಿಗ್ಲಿ, ಬಾಪುಗೌಡ ಸಂಕನಗೌಡ್ರ, ಅಶೋಕ ಪಾಟೀಲ, ನಾಗೇಶರಾವ್, ಅರವಿಂದ ಕಾಮತ, ಮುರಗೇಶ ಬಡ್ನಿ, ಚಂದ್ರಣ್ಣ ಸುರಕೋಡ, ಶರಣು ಗದಗ, ಮೌಲಾಲಿ ಮುಲ್ಲಾನವರ, ರೇಣುಕಾಪ್ರಸಾದ ಹಿರೇಮಠ, ವಿಶ್ವನಾಥ ಯಳಮಲಿ ಮುಂತಾದವರು ಉಪಸ್ಥಿತರಿದ್ದರು.

### ಕಟ್ಟಡ ಕಾರ್ಮಿಕರ ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳಿಗೆ ಚಾಲನೆ ನೀಡಿದ ಸಚಿವ ಸಂತೋಷ ಲಾಡ್

## ಕಾರ್ಮಿಕರು ಇರುವಲ್ಲಿಯೇ ಆರೋಗ್ಯ ಸೇವೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಟ್ಟಡ ಕಾರ್ಮಿಕರ ಆರೋಗ್ಯ, ಸುರಕ್ಷತೆ ಹಿನ್ನೆಲೆಯಲ್ಲಿ ರಾಜ್ಯ ಸರಕಾರದ ಕಾರ್ಮಿಕ ಇಲಾಖೆಯಿಂದ ಪ್ರತಿ ಜಿಲ್ಲೆಯಲ್ಲಿ ಆರೋಗ್ಯ ಕ್ಲಿನಿಕ್ ಸಂಚಾರಿ ವಾಹನಗಳನ್ನು ರೂಪಿಸಲಾಗಿದೆ. ಕಾರ್ಮಿಕರು ಮತ್ತು ಅವರ ಮಕ್ಕಳು ಆರೋಗ್ಯವಾಗಿ ಇರಬೇಕೆಂಬ ಹಿತದೃಷ್ಟಿಯಿಂದ ಜಿಲ್ಲೆಯಲ್ಲಿ ಕಟ್ಟಡ ನಿರ್ಮಾಣವಾಗುವ ಪ್ರದೇಶಕ್ಕೆ ಹೋಗಿ, ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆಯಡಿ ಆರೋಗ್ಯ ತಪಾಸಣೆ ಮಾಡಲಾಗುತ್ತದೆ ಎಂದು ಕಾರ್ಮಿಕ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಹೇಳಿದರು.

ಮಂಗಳವಾರ ಧಾರವಾಡದ ಸರ್ಕ್ಯೂಟ್ ಹೌಸ್ ಆವರಣದಲ್ಲಿ ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆಯ 3 ವಾಹನಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.



ಕಟ್ಟಡ ನಿರ್ಮಾಣ ಪ್ರದೇಶಗಳಿಗೆ ಹೋಗಿ, ಜ್ವರ, ಕೆಮ್ಮು, ಮಧುಮೇಹ, ರಕ್ತದೊತ್ತಡ, ರಕ್ತ ಪರೀಕ್ಷೆ ಸೇರಿದಂತೆ ಸುಮಾರು 20 ಪ್ಯಾರಾ ಮೀಟರ್‌ಗಳ ಅನ್ವಯ ಕಾರ್ಮಿಕರ ಹಾಗೂ ಅವರ ಸಂಬಂಧಿಗಳ ಆರೋಗ್ಯ ತಪಾಸಣೆ ಮಾಡಲಾಗುತ್ತದೆ. ತಪಾಸಣೆ ಕುರಿತ ಅವರ ದಾಖಲೆಗಳು ಆನ್‌ಲೈನ್ ಮೂಲಕ ನೇರವಾಗಿ ಕಾರ್ಮಿಕ ಇಲಾಖೆಯ ಮುಖ್ಯ ಕಚೇರಿಗೆ ತಲುಪುತ್ತದೆ. ಕಾರ್ಮಿಕರ ಅಧಿಕೃತ ದಾಖಲೆಗಳನ್ನು ಅಂತರ್ಜಾಲದ ಮೂಲಕ ದೃಢಪಡಿಸಿಕೊಳ್ಳಲಾಗುತ್ತದೆ ಎಂದರು.

ಕಾರ್ಯಾದೇಶ ಪಡೆದಿರುವ ಸಂಸ್ಥೆಗಳು ಪ್ರತಿ ತಿಂಗಳು ಸಂಚಾರಿ ಆರೋಗ್ಯ ಕ್ಲಿನಿಕ್ ಸಂಚರಿಸುವ ಮಾರ್ಗ, ಸ್ಥಳದ ಬಗ್ಗೆ ರೂಟ್ ಮ್ಯಾಪ್‌ನ್ನು ಸಿದ್ಧಪಡಿಸಿ, ಖಾತರಿಪಡಿಸಿಕೊಳ್ಳಬೇಕು. ಪ್ರತಿ ತಿಂಗಳ ರೂಟ್ ಮ್ಯಾಪ್‌ಗಳನ್ನು ಕನಿಷ್ಠ 15 ದಿನಗಳ ಮುಂಚಿತವಾಗಿ ಸಿದ್ಧಪಡಿಸಿ, ವಾಹನಗಳು ಸಂಚರಿಸುವ ಮಾರ್ಗದಲ್ಲಿ ಸಾರ್ವಜನಿಕರಿಗೆ ಮಾಹಿತಿ ನೀಡಲು ಪ್ರಚಾರ ಮಾಡಬೇಕು ಎಂದರು. ರೂಟ್ ಮ್ಯಾಪ್ ತಯಾರಿಸುವಾಗ ಸಂಸ್ಥೆಯು ಎಲ್ಲಾ ತಾಲೂಕುಗಳು ಮತ್ತು ತಾಲೂಕಿನ ಎಲ್ಲಾ ಪ್ರದೇಶಗಳು (ಗ್ರಾಮ, ವಾರ್ಡ್, ಹೋಬಳಿ) ಒಳಪಡುವ ರೀತಿ ಕ್ರಮವಹಿಸಿ ಹಾಗೂ ಎಲ್ಲಾ ವಿಧಾನಸಭಾ ಕ್ಷೇತ್ರಗಳು ಒಳಪಡುವ ರೀತಿಯಲ್ಲಿ ರೂಟ್ ಮ್ಯಾಪ್‌ನ್ನು ಸಿದ್ಧಪಡಿಸುತ್ತಾರೆ. ರೂಟ್ ಮ್ಯಾಪ್‌ನ್ನು ಸಿದ್ಧಪಡಿಸುವಾಗ ಪ್ರಯಾಣದ ಸಮಯವು ಅತ್ಯಂತ ಕಡಿಮೆ ಇರುವಂತೆ ಹಾಗೂ ನಿಗದಿತ ಸ್ಥಳದಲ್ಲಿ ಸಂಚಾರಿ ಆರೋಗ್ಯ ಘಟಕಗಳು ಕನಿಷ್ಠ 4 ಗಂಟೆಗಳಾದರೂ ಕಾರ್ಯನಿರ್ವಹಿಸುವುದನ್ನು ಖಾತರಿಪಡಿಸಿಕೊಳ್ಳಲಾಗುತ್ತದೆ ಎಂದು ಹೇಳಿದರು.

ಶಾಸಕ ಅರವಿಂದ ಬೆಲ್ಲದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶಾಸಕ ಎನ್.ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಸಿಇಓ ಭುವನೇಶ ಪಾಟೀಲ, ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ ಹಾಗೂ ಕಾರ್ಮಿಕ ಇಲಾಖೆ ಸಹಾಯಕ ಆಯುಕ್ತ ಸಚಿನ್, ಜಿಲ್ಲಾ ಕಾರ್ಮಿಕ ಅಧಿಕಾರಿಗಳು, ಹಿರಿಯ ಕಾರ್ಮಿಕ ನಿರೀಕ್ಷಕರು, ಇತರರು ಉಪಸ್ಥಿತರಿದ್ದರು.

> ಹೆಚ್ಚಿನ ಸಂಖ್ಯೆಯ ನೋಂದಾಯಿತ ಕಾರ್ಮಿಕರಿಗೆ ಸೌಲಭ್ಯ ಸಿಗುವಂತಹ ಪ್ರದೇಶಗಳಿಗೆ ಹೋಗುವುದು. ಸಂಚಾರಿ ಆರೋಗ್ಯ ಘಟಕಗಳು ಕಾರ್ಯನಿರ್ವಹಿಸು ಸ್ಥಳಗಳಲ್ಲಿ ಶೌಚಾಲಯಗಳು ಇರುವುದನ್ನು ಖಾತರಿಪಡಿಸಿಕೊಳ್ಳುವುದು. ಸದರಿ ಸಂಚಾರಿ ಆರೋಗ್ಯ ಘಟಕಗಳಲ್ಲಿ 25 ವೈದ್ಯಕೀಯ ಉಪಕರಣಗಳು, 5 ಪ್ರಯೋಗಾಲಯದ ಉಪಕರಣಗಳು ಹಾಗೂ 37 ವಿವಿಧ ವೈದ್ಯಕೀಯ ಬಳಕೆ ವಸ್ತುಗಳು ಇರುತ್ತವೆ. ಈ ಕುರಿತು ಕಾರ್ಮಿಕ ಇಲಾಖೆ ಅಧಿಕಾರಿಗಳು ನಿಗಾ ವಹಿಸುತ್ತಾರೆ ಎಂದು ಸಚಿವ ಸಂತೋಷ್ ಲಾಡ್ ಹೇಳಿದರು.

## ಬಿಂಕದಕಟ್ಟಿ ಗ್ರಾ.ಪಂ ಅಧ್ಯಕ್ಷರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಬಿಂಕದಕಟ್ಟಿ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ನಿಂಗಪ್ಪ ಈರಪ್ಪ ಪರಪ್ಪನವರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಅಭ್ಯರ್ಥಿಯಾಗಿ ಅವರೊಬ್ಬರೇ ನಾಮಪತ್ರ ಸಲ್ಲಿಸಿದ ಕಾರಣ ಸೂಚಕರಾದ ವರದಾರೆಡ್ಡಿ ದೇವರಡ್ಡಿ ರಂಗಪ್ಪನವರ ಸೂಚನೆಯಂತೆ ಚುನಾವಣಾ ಅಧಿಕಾರಿಗಳು ನಿಂಗಪ್ಪ ಈರಪ್ಪ ಪರಪ್ಪನವರ ಇವರ ಆಯ್ಕೆಯನ್ನು ಘೋಷಿಸಿ ಪ್ರಮಾಣಪತ್ರವನ್ನು ನೀಡಿದರು.



ಈ ಸಂದರ್ಭದಲ್ಲಿ ಬಿಂಕದಕಟ್ಟಿ ಗ್ರಾಮದ ಹಿರಿಯರಾದ ರವೀಂದ್ರ ಎಂ.ಮೂಲಿಮನಿ, ಗದಗ ತಾ.ಪಂ ಮಾಜಿ ಸದಸ್ಯ ಎಂ.ಐ. ಪಾಟೀಲ, ಬಿಂಕದಕಟ್ಟಿ ಗ್ರಾ.ಪಂ ಸರ್ವ ಸದಸ್ಯರು, ಹಿರೇಹಂದಿಗೋಳ ಮತ್ತು ಬಿಂಕದಕಟ್ಟಿ ಗ್ರಾಮಸ್ಥರು ನೂತನ ಅಧ್ಯಕ್ಷರಿಗೆ ಅಭಿನಂದನೆಗಳನ್ನು ತಿಳಿಸಿದರು.

## ಮಣಿಪುರದಲ್ಲಿ ಶಾಂತಿ ಕಾಪಾಡುವಲ್ಲಿ ರಾಷ್ಟ್ರಪತಿ ಆಳ್ವಿಕೆ ವಿಫಲ: ಕಾಂಗ್ರೆಸ್ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಮಣಿಪುರ

ರಾಜ್ಯದ ಶಾಂತಿ ಕಾಪಾಡುವಲ್ಲಿ ರಾಷ್ಟ್ರಪತಿ ಆಳ್ವಿಕೆ "ವಿಫಲವಾಗಿದೆ" ಎಂದು ಮಣಿಪುರ ಕಾಂಗ್ರೆಸ್ ಅಧ್ಯಕ್ಷ ಕೀಶಮ್ ಮೇಘಚಂದ್ರ ಅವರು ಆರೋಪಿಸಿದ್ದಾರೆ. ಸರ್ಕಾರಿ ಬಸ್ಸಿನ ವಿಂಡ್ ಶೀಲ್ಡ್ ಮೇಲೆ ರಾಜ್ಯದ ಹೆಸರನ್ನು ಮರೆಮಾಡಿದ್ದಕ್ಕಾಗಿ ಪಕ್ಷವು ಪ್ರತಿಭಟನೆ ನಡೆಸುತ್ತಿದೆ. ಈ ವರ್ಷದ ಜನವರಿಯಲ್ಲಿ ಅಧಿಕಾರ ವಹಿಸಿಕೊಂಡ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ ಅವರನ್ನು ಕೇಂದ್ರವು ಹಿಂದಕ್ಕೆ ಕರೆಸಿಕೊಳ್ಳಬೇಕು ಎಂದು ಅವರು ಇದೇ ವೇಳೆ ಒತ್ತಾಯಿಸಿದ್ದಾರೆ. ಮಣಿಪುರದಲ್ಲಿ ಶಾಂತಿ

ರಾಜ್ಯದಲ್ಲಿ ನಡೆಯುತ್ತಿರುವ ಜನಾಂಗೀಯ ಹಿಂಸಾಚಾರದ ಕಾರಣ ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ರಾಜೀನಾಮೆ ನೀಡಿದ ನಂತರ ಕೇಂದ್ರ ಸರ್ಕಾರವು ಫೆಬ್ರವರಿ 13 ರಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಹೇರಿತ್ತು. ಈ ವೇಳೆ 2027 ರವರೆಗೆ ಅಧಿಕಾರಾವಧಿಯನ್ನು ಹೊಂದಿರುವ ರಾಜ್ಯ ವಿಧಾನಸಭೆಯನ್ನು ಅಮಾನತಿನಲ್ಲಿ ಇರಿಸಲಾಗಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಬರೆದಿರುವ ಮೇಘಚಂದ್ರ, "ಡಬಲ್-ಎಂಜಿನ್ ಸರ್ಕಾರವು ಕಳೆದ 2 ವರ್ಷಗಳಿಗೂ ಹೆಚ್ಚು ಕಾಲ ಮಣಿಪುರವನ್ನು ವಿಫಲಗೊಳಿಸಿದೆ.

ರಾಷ್ಟ್ರಪತಿ ಆಳ್ವಿಕೆಯೂ ಮಣಿಪುರವನ್ನು ವಿಫಲಗೊಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಮಣಿಪುರವನ್ನು ಪದೇ ಪದೇ ವಿಫಲಗೊಳಿಸುತ್ತಿದ್ದಾರೆ. ಗೃಹ ಸಚಿವ ಅಮಿತ್ ಶಾ ರಾಜೀನಾಮೆ ನೀಡಬೇಕು. ಮಣಿಪುರ ರಾಜ್ಯಪಾಲರನ್ನು ಹಿಂದಕ್ಕೆ ಕರೆಸಿಕೊಳ್ಳಬೇಕು." ಎಂದು ಆಗ್ರಹಿಸಿದ್ದಾರೆ.

'ಡಬಲ್ ಎಂಜಿನ್' ಎಂಬ ಪದವನ್ನು ಬಿಜೆಪಿ ನಾಯಕರು ಕೇಂದ್ರದಲ್ಲಿ ಮತ್ತು ರಾಜ್ಯದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಪಕ್ಷದ ಸರ್ಕಾರವನ್ನು ಉಲ್ಲೇಖಿಸಲು ಬಳಸುತ್ತಾರೆ.

### ಭೂ ತಾಯಿಗೆ ಹಸಿರು ಸೀರೆಯುಡಿಸಲು ಸಜ್ಜುಗೊಂಡ ರೈತ ಸಮುದಾಯ

## ಮುಂಗಾರು ಎದುರಿಸಲು ಕೃಷಿ ಇಲಾಖೆ ಸಿದ್ಧ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆ ನರೇಗಲ್ಲ ಹೋಬಳಿಯಲ್ಲಿ ಇದುವರೆಗೂ ಆವರಿಸಿದ್ದ ಬರದ ಛಾಯೆ ಮಾಯವಾಗುವಂತೆ ಮಾಡಿದೆ. ಮುಂಗಾರು ಪೂರ್ವದಲ್ಲೇ ಮುಂಗಾರಿನಂತೆ ಮೋಡಗಳು ಆರ್ಭಟಿಸುತ್ತಿದ್ದು, ಮಳೆ ಸುರಿಸುತ್ತಿರುವುದು ರೈತರಲ್ಲಿ ಹರ್ಷ ಮೂಡಿಸುವದರೊಂದಿಗೆ ನಿರೀಕ್ಷೆಗಳನ್ನು ಹುಟ್ಟಿಸುತ್ತಿದೆ.

> ರೋಣ ಮತ್ತು ಗಜೇಂದ್ರಗಡ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕೃಷಿ ಜಮೀನುಗಳಲ್ಲಿ ಪೂರ್ವ ಮುಂಗಾರು ಮತ್ತು ಮುಂಗಾರು ತಯಾರಿ ಜೋರಾಗಿದ್ದು, ರೈತರಿಗೆ ಬೇಕಾದ ಅಗತ್ಯ ಬೀಜ, ರಸಗೊಬ್ಬರವನ್ನು ಕೃಷಿ ಇಲಾಖೆಯಿಂದ ಸಮರ್ಥವಾಗಿ ಒದಗಿಸಲು ಈಗಾಗಲೇ ರೈತ ಸಂಕರ್ಪಕ ಕೇಂದ್ರಗಳಲ್ಲಿ ಬೀಜ ಮತ್ತು ಗೊರಬ್ಬರ ದಾಸ್ತಾನು ಆಗಿದೆ.
>
> **– ರವೀಂದ್ರಗೌಡ ಪಾಟೀಲ.**
> ರೋಣ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ.

ರೈತರ ಜೀವನಾಡಿ ಎತ್ತುಗಳಿಗೆ ಭೂಮಿ ಸಾಗುವಳಿ ಮಾಡಲು ಸಾಕಷ್ಟು ಬೇಡಿಕೆ ಬರುತ್ತಿದೆ. ಕಳೆದ ವರ್ಷ ಜೂನ್ ತಿಂಗಳನಲ್ಲೂ ಈ ಪರಿಯಲ್ಲಿ ಮಳೆಯಾಗಿರಲಿಲ್ಲ. ವರ್ಷವಿಡೀ ಮಳೆಯ ಕೊರತೆಯನ್ನು ಕಂಡು, ಈ ವರ್ಷವೂ ಬಿರುಬೇಸಿಗೆಯನ್ನು ಅನಿಭವಿಸಿ ಕಳಾಹೀನವಾಗಿದ್ದ ವಸುಂಧರೆ ಬೀಳುತ್ತಿರುವ ಮಳೆಗೆ ಅಕ್ಷರಶಃ ತಣಿಯುತ್ತಿದೆ. ಈಗಾಗಲೇ ರೈತರು ಭೂಮಿಯನ್ನು ಹಸನು ಮಾಡಿಕೊಳ್ಳುವತ್ತ ತಮ್ಮ ಚಿತ್ತ ಹರಿಸಿದ್ದಾರೆ. ಮುಂಗಾರು ಪೂರ್ವದ ಮಳೆಗೆ ಬಿತ್ತನೆ ಮಾಡಲು ಹೋಬಳಿಯ ಕೆಲವೊಂದು ಗ್ರಾಮದ ರೈತರು ಸಿದ್ಧತೆ ನಡೆಸಿದ್ದಾರೆ. ಇನ್ನುಳಿದ ಗ್ರಾಮಗಳಲ್ಲಿ ಮುಂಗಾರುನಲ್ಲಿ ಬಿತ್ತನೆ ಮಾಡಲು ಬೀಜ, ರಸ ಗೊಬ್ಬರವನ್ನು ದಾಸ್ತಾನಕ್ಕೆ ಮುಂದಾಗುತ್ತಿದ್ದಾರೆ. ಕೃಷಿ ಇಲಾಖೆ ಕೂಡ ಸಜ್ಜಾಗಿದೆ.

ವ ೊ ದ ' ಲಿ ನಿ ೦ ದ ' ಲ ೂ ಭೂಮಿಯ ಫಲವತ್ತೆಗಾಗಿ ರೈತರು ಸಗಣಿ ಗೊಬ್ಬರ ಅವಲಂಬಿಸಿದ್ದರು. ಆದರೆ, ರಾಸಾಯನಿಕ ಗೊಬ್ಬರಗಳ ಬಳಕೆ ಆರಂಭವಾಗುತ್ತಿದ್ದಂತೆ ಸೆಗಣಿ ಗೊಬ್ಬರ ಬಳಕೆಯಲ್ಲೂ ಇಳಿಮುಖ ಕಂಡುಬಂದಿತು. ಇತ್ತೀಚಿಗೆ ಸಾವಯುವ ಕೃಷಿ ಪದ್ಧತಿ ಪ್ರಚಾರಕ್ಕೆ ಬರುತ್ತಿದ್ದಂತೆ ಮತ್ತೆ ರೈತರು ಸಾಂಪ್ರದಾಯಿಕ ಸೆಗಣಿ ಗೊಬ್ಬರದ ಬಳಕೆಯತ್ತ ಮನಸ್ಸು ಮಾಡಿ ಹೆಚ್ಚು ಹಣವನ್ನು ಕೊಟ್ಟು ತಿಪ್ಪೆ ಗೊಬ್ಬರವನ್ನು ಈಗಾಗಲೇ ತಮ್ಮ ಜಮೀನುಗಳಲ್ಲಿ ಹರಿವೆ ನೆಗಿಲವನ್ನು ಹೊಡೆಯುವ ಮೂಲಕ ಬಿತ್ತನೆಗೆ ಭೂಮಿಯನ್ನು ಸಜ್ಜುಗೊಳಿಸಿದ್ದಾರೆ.

## ಮುಂಗಾರು ಬಿತ್ತನೆ ಬೀಜಗಳ ವಿತರಣೆ




■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕಿನ ಶಿರಗುಪ್ಪಿ ರೈತ ಸಂಪರ್ಕ ಕೇಂದ್ರದಲ್ಲಿ ಕಾರ್ಮಿಕ ಸಚಿವ ಸಂತೋಷ ಲಾಡ್ ಹಾಗೂ ಶಾಸಕ ಎನ್.ಎಚ್. ಕೋನರಡ್ಡಿ ಅವರು ಮುಂಗಾರು ಬಿತ್ತನೆ ಬೀಜಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಉತ್ತಮ ಗುಣಮಟ್ಟದ ಬಿತ್ತನೆ ಬೀಜಗಳನ್ನು ರೈತರಿಗೆ ಪೂರೈಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಲ್ಲನಗೌಡ ಪಾಟೀಲ, ತಾಲೂಕಾ ಕೃಷಿಕ ಸಮಾಜದ ಅಧ್ಯಕ್ಷ ಗುರುನಾಥಗೌಡ ಮಾದಾಪುರ, ಕೃಷಿಕ ಸಮಾಜ ಜಿಲ್ಲಾ ಪ್ರತಿನಿಧಿ ಲಿಂಗಪ್ಪ ಬಾಡಿನ, ತಹಸೀಲ್ದಾರ ಜೆ.ಬಿ. ಮಜ್ಜಗಿ, ಸಹಾಯಕ ಕೃಷಿ ನಿರ್ದೇಶಕಿ ಮಂಜುಳಾ ತೆಂಬದ, ಕೃಷಿ ಅಧಿಕಾರಿ ಅಕ್ರಂ ಆಲದಕಟ್ಟಿ, ಎಸ್.ಬಿ. ಸೂಡಿ, ಶಿರಗುಪ್ಪಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು ಮತ್ತು ಶಿರಗುಪ್ಪಿ ಗ್ರಾಮದ ರೈತ ಮುಖಂಡರು ಉಪಸ್ಥಿತರಿದ್ದರು.

### ಸಾಧನಾ ಕೋಚಿಂಗ್ ಸೆಂಟರ್‌ನ ಬೇಸಿಗೆ ಶಿಬಿರದ ಮುಕ್ತಾಯ ಸಮಾರಂಭ

## ಸಾಧನೆಯ ಕನಸು ಈಗಿನಿಂದಲೇ ಇರಲಿ




■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಮ್ಮ ಜೀವನದಲ್ಲಿ ನೀವು ಏನನ್ನಾದರೂ ಸಾಧಿಸುವ ಗುರಿಯನ್ನು ಹೊಂದಿರಬೇಕು. ಏನು ಸಾಧಿಸಬೇಕೆನ್ನುವ ಕನಸನ್ನು ನೀವು ಈಗಿನಿಂದಲೇ ಹೊಂದಿರಬೇಕೆಂದು ಎಸ್.ಎ ಪ.ಪೂ ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಹೇಳಿದರು. ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದ ಸಾಧನಾ ಕೋಚಿಂಗ್ ಸೆಂಟರ್‌ನ ಬೇಸಿಗೆ ಶಿಬಿರದ ಮುಕ್ತಾಯ ಸಮಾರಂಭದಲ್ಲಿ ಅವರು ಮಾತನಾಡಿದರು.


ಪಾಲಕರು ನಿಮ್ಮ ಬಗ್ಗೆ ವಿಶೇಷ ಕಾಳಜಿ ವಹಿಸಿ ನಿಮಗೆ ಕಲಿಯಲು ಎಲ್ಲ ಅನುಕೂಲತೆಗಳನ್ನು ಮಾಡಿಕೊಡುತ್ತಾರೆ. ಅದನ್ನು ನೀವು ಸಾರ್ಥಕಪಡಿಸಿಕೊಳ್ಳಬೇಕು. ಸಿನಿಮಾ ನಟನಟಿಯರು ನಿಮಗೆಂದಿಗೂ ಮಾದರಿಯಾಗಬಾರದು. ಬದಲಾಗಿ ಸುಧಾ ಮೂರ್ತಿ, ಅಬ್ದುಲ್‌ಕಲಾಂ ಇಂಥವರು ನಿಮಗೆ ಮಾದರಿಯಾಗಬೇಕು. ಅದಕ್ಕಾಗಿ ನಿಮ್ಮ ಬಿಡುವಿನ ವೇಳೆಯಲ್ಲಿ ಅಂಥವರ ಜೀವನ ಚರಿತ್ರೆಗಳನ್ನು ಓದಿ ಸ್ಫೂರ್ತಿ ಪಡೆಯಿರಿ ಎಂದರು.

ಉಪನ್ಯಾಸಕ ಎಫ್.ಎನ್. ಹುಡೇದ ಮಾತನಾಡಿ, ನಾವು ನಮ್ಮ ಜೀವನದಲ್ಲಿ ಯಾವ ವಯಸ್ಸಿನಲ್ಲಿ ಏನು ಮಾಡಬೇಕೋ ಅದನ್ನೇ ಮಾಡಬೇಕು. ಅಧ್ಯಯನದ ಸಮಯದಲ್ಲಿ ಅಧ್ಯಯನ ಬಿಟ್ಟು ಬೇರೆ ಯಾವುದಕ್ಕೂ ಮನಸ್ಸು ಹರಿಸಬಾರದು. ಶ್ರದ್ಧೆ ಮತ್ತು ಏಕಚಿತ್ತದಿಂದ ಓದಿದಾಗ ವಿದ್ಯೆ ತಲೆಗೆ ಹತ್ತುತ್ತದೆ. ಈ ದಿನದಲ್ಲಿ ನೀವು ವಿದ್ಯೆಯನ್ನು ಅಲಕ್ಷ್ಯ ಮಾಡಿದರೆ ಅದು ನಿಮ್ಮನ್ನು ನಿಮ್ಮ ಜೀವನದುದ್ದಕ್ಕೂ ಬಾಧಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮುತ್ತು ಕಡಗದ, ಉಪನ್ಯಾಸಕ ಶಿವಾನಂದ ಗೋಗೇರಿ, ಉಪನ್ಯಾಸಕ ಹೊನವಾಡ, ಮಲ್ಲಯ್ಯ ಗುಂಡಗೋಪುರಮಠ, ನಂದೀಶ ಅಚ್ಚಿ, ಉಪನ್ಯಾಸಕ ಜಯಕಾಂತ ನರಗುಂದ, ವಿರುಪಾಕ್ಷ ಸಂಗನಾಳ, ಈಶ್ವರ ಬೆಟಗೇರಿ, ಶರಣಯ್ಯ ಬಾಗಲತ್ತಿ, ವಿಜಯ ಕುಂಟೋಜಿ, ವಿನಯಶ್ರೀ ಪರಯ್ಯನಮಠ, ವಿದ್ಯಾ ಪಾಟೀಲ, ಉದಯಕುಮಾರ ಸವದಿ, ಮುತ್ತಣ್ಣ ಗೆದಗೇರಿ, ಸಣ್ಣಪ್ಪ ಹರ್ತಿ, ಶಿವಪ್ಪ ಕರಿಯತ್ತಿನ, ಚೇತನಾ ಕರಿಯತ್ತಿನ, ಸಾಗರ ಕುಂಬಾರ ಮತ್ತಿತರರಿದ್ದರು.

ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 85ಕ್ಕೂ ಹೆಚ್ಚು ಅಂಕ ಗಳಿಸಿದ ನಾಗಲಕ್ಷ್ಮಿ ಸಂಗನಾಳ, ಸ್ನೇಹಾ ಜುಟ್ಲ, ಬಸಮ್ಮ ಗಡಾದ, ಹರ್ಷಿತಾ ಪಾಟೀಲ, ಸಿಂಧೂ ಬೂದಿಹಾಳ, ಪ್ರಗತಿ ಹಿರೇಹಾಳರನ್ನು ಗೌರವಿಸಲಾಯಿತು. ಅನುಪಮಾ ಗ್ರಾಮಪುರೋಹಿತ ಸ್ವಾಗತಿಸಿದರು. ಗೌರಿ ಪಾಟೀಲ ನಿರೂಪಿಸಿದರು. ಸಂಜಯ ಯಲಿಗಾರ ವಂದಿಸಿದರು.

## ತೊಗರಿ, ಹೆಸರು ಬೀಜ ವಿತರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಡಾ. ಪಂ. ಪುಟ್ಟರಾಜ ರೈತ ಸಂಘ ರಾಜ್ಯ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳುಗುಂದ ಅಧ್ಯಕ್ಷತೆಯಲ್ಲಿ, ಕೃಷಿ ಇಲಾಖೆಯ ಅಧಿಕಾರಿಗಳಾದ ಬಸವರಾಜೇಶ್ವರಿ ಸಜ್ಜನ್ನವರ ಉಪಸ್ಥಿತಿಯಲ್ಲಿ ರೈತ ಸಂಪರ್ಕ ಕೇಂದ್ರ ಬೆಟಗೇರಿ ಕಾರ್ಯಾಲಯದಲ್ಲಿ ರೈತ ಬಾಂಧವರಿಗೆ ತೊಗರಿ ಮತ್ತು ಹೆಸರಿನ ಬೀಜಗಳನ್ನು ಬೀಜಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಯುವ ಘಟಕ ಅಧ್ಯಕ್ಷರು ಸಿರಾಜ ಲಕ್ಕುಂಡಿ, ಎಸ್ಸಿ ಘಟಕದ ಜಿಲ್ಲಾ ಮಹಿಳಾ ಅಧ್ಯಕ್ಷರು ರೇಖಾ ಹುಲ್ಲೂರು, ಗದಗ ಜಿಲ್ಲಾ ಕಾರ್ಯದರ್ಶಿ ಬಸವರಾಜ್ ಮುಧೋಳಮಠ, ಯುವ ಘಟಕದ ತಾಲೂಕಾಧ್ಯಕ್ಷರು ವೆಂಕಟೇಶ್, ಯುವ ಘಟಕ ಗದಗ ಉಪಾಧ್ಯಕ್ಷ ಗವಿಸಿದ್ದಯ್ಯ, ಇಲಾಖೆಯ ಸಿಬ್ಬಂದಿಗಳಾದ ರಮೇಶ್ ಜಂಟಿ, ಸಂಜೀವ ಸೋಮರೆಡ್ಡಿ, ಸುಶಿತಾ ಹೆಬಸೂರ, ಸುನೀಲ್ ತಳವಾರ್, ರೈತರಾದ ಬಸವಂತಪ್ಪ ಕವಲೂರ್, ಮಂಜುನಾಥ್, ಮೆಹಬೂಬ್‌ಸಾ ಪಾಪಣ್ಣವರ, ಕಲ್ಮೇಶ್ ವಾಲ್ಮೀಕಿ, ಶಶಿಧರ್ ಹೂಗಾರ್, ವೀರಪ್ಪ ತಳವಾರ್ ಮುಂತಾದವರಿದ್ದರು.

### ಮೇ 29ರಿಂದ ಜೂನ್ 12ರವರೆಗೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

## ಅಭಿಯಾನದ ತಂಡಗಳಿಂದ ಗ್ರಾಮ ಭೇಟಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಕಸಿತ ಕೃಷಿ ಸಂಕಲ್ಪ ಅಭಿಯಾನ-2025ರ ಅಡಿ ಮುಂಗಾರು ಪೂರ್ವ ಸಿದ್ಧತೆ ಕಾರ್ಯಕ್ರಮವನ್ನು ಕೇಂದ್ರ ಸರಕಾರದ ಕೃಷಿ ಮಂತ್ರಿಗಳ ಮಾರ್ಗದರ್ಶನದಂತೆ ದೇಶಾದ್ಯಾಂತ ಹಮ್ಮಿಕೊಳ್ಳುತ್ತಿದೆ. ವಿಕಸಿತ ಕೃಷಿ ಸಂಕಲ್ಪ ಅಭಿಯಾನವು ಭಾರತೀಯ ಕೃಷಿ ಅನುಸಂದಾನ ಸಂಸ್ಥೆ ಹಾಗೂ ಅದರ ಅಂಗ ಸಂಸ್ಥೆಗಳು, ದೇಶದ ಕೃಷಿ ವಿಜ್ಞಾನ ಕೇಂದ್ರಗಳು, ಕೃಷಿ ವಿಶ್ವ ವಿದ್ಯಾಲಯ, ಐ.ಸಿ.ಎ.ಆರ್ ಸಂಸ್ಥೆಗಳು, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪಶು ಸಂಗೋಪನ ಇಲಾಖೆ, ಇಫ್ಕೊ, ಅಧಿಕಾರಿಗಳ ಸಹಯೋಗದಲ್ಲಿ ಈ ಕಾರ್ಯಕ್ರಮವನ್ನು ಮೇ. 29 ಜೂನ್ 12ರವರೆಗೆ ಏರ್ಪಡಿಸಲಾಗುವುದು.

ದೇಶದ ಎಲ್ಲ ಗ್ರಾಮಗಳನ್ನು ಈ ಯೋಜನೆ ಅಡಿಯಲ್ಲಿ ಸಂಪರ್ಕಿಸಿ ಮಾಹಿತಿ ನೀಡಲಾಗುವುದು. ಪ್ರಮುಖವಾಗಿ ಕೃಷಿಯಲ್ಲಿ ವಿನೂತನ ತಂತ್ರಜ್ಞಾನಗಳು, ಹೊಸ ತಳಿಗಳು, ಬೀಜೋಪಚಾರ, ಮಣ್ಣು ಆಧಾರಿತ ಕೃಷಿ ಬೆಳೆಗಳು, ಕೃಷಿ ಭಾಗ್ಯ ಯೋಜನೆ, ಸಮಗ್ರ ಬೇಸಾಯ ಪದ್ಧತಿ, ಸರಕಾರದ ವಿವಿಧ ಯೋಜನೆಗಳು ಹಾಗೂ ಕೃಷಿಯಲ್ಲಿ ಹೆಚ್ಚಿನ ಲಾಭವನ್ನು ಹೇಗೆ ಪಡಯಬಹುದು ಎಂಬುದರ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

ಜಿಲ್ಲೆಯ ಆಯಾ ಹೋಬಳಿಯ ರೈತ ಸಂಪರ್ಕ ಕೇಂದ್ರಗಳು ಹಾಗೂ ಗ್ರಾಮ ಪಂಚಾಯತ ಮೂಲಕ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ತಂಡವು ಗ್ರಾಮಗಳಿಗೆ ಭೇಟಿ ನೀಡಿ ಮಾಹಿತಿಯನ್ನು ನೀಡಲಾಗುವುದು. ಈ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಭಿಯಾನದ ತಂಡವು ತಮ್ಮ ಗ್ರಾಮಕ್ಕೆ ಬಂದಾಗ ರೈತರೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಾಹಿತಿಯನ್ನು ತಿಳಿದುಕೊಂಡು ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮವನ್ನು ಯಶಸ್ವಿಗೊಳಿಸೋಣ ಎಂದು ಕೇಂದ್ರದ ಮುಖ್ಯಸ್ಥರು ತಿಳಿಸಿದ್ದಾರೆ.

> ಈ ಅಭಿಯಾನವು ಕೃಷಿ ಉತ್ಪಾದನೆ ಹೆಚ್ಚಿಸಲು, ಕೃಷಿ ವೆಚ್ಚ ಕಡಿಮೆ ಮಾಡಲು, ಆಹಾರ ಭದ್ರತೆ ಖಚಿತಪಡಿಸಲು, ದೇಶದಲ್ಲಿ ಧಾನ್ಯ ಸಂಗ್ರಹಣೆಗೆ ಮತ್ತು ಭವಿಷ್ಯದ ತಲೆಮಾರಿಗೆ ಕೃಷಿ ಸಂಬಂಧಿತ ಮಾಹಿತಿ, ಸರಿಯಾದ ರಸಗೊಬ್ಬರ ಬಳಕೆ, ಸ್ಥಳೀಯ ಪರಿಸ್ಥಿತಿಗೆ ಹೊಂದಿಕೊಂಡ ನಿರ್ಧಾರಗಳು, ನಿಖರವಾದ ಸಂಶೋಧನೆ ಮತ್ತು ಉತ್ತಮ ಬಿತ್ತನೆ ಬೀಜಗಳು ರೈತನ ಉತ್ಪಾದನೆ ಹೆಚ್ಚಿಸಲು ಸಹಾಯಕವಾಗಲಿದೆ ಎಂದು ಕೇಂದ್ರ ಕೃಷಿ ಸಚಿವರಾದ ಶಿವರಾಜ ಶಿವರಾಜ್ ಸಿಂಗ್ ಚೌಹಾಣ್ ಅವರು ತಿಳಿಸಿರುವರು. ಕೃಷಿ ವಿಜ್ಞಾನಿಗಳು, ಇಲಾಖೆ ಮತ್ತು ರೈತರನ್ನು ಪರಸ್ಪರ ಸಂಪರ್ಕಿಸುವ ಪ್ರಬಲ ಯತ್ನವು ಈ ಅಭಿಯಾನದ ಮೂಲಕ ನಡೆಸಲಾಗುವುದು.

# ಕ್ಯಾಂಪಸ್ ಸಂದರ್ಶನ ಯಶಸ್ವಿ




■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ನರಸಾಪೂರ ಸರ್ಕಾರಿ ಪಾಲಿಟೆಕ್ನಿಕ್, ಗದಗ ಸಂಸ್ಥೆಯಲ್ಲಿ ಡಿಪ್ಲೋಮಾ ವಿವಿಧ ವಿಭಾಗಗಳಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ Suzlon Global Energy Limited, Karnataka ಬಹುರಾಷ್ಟ್ರೀಯ ಕಂಪನಿ ವತಿಯಿಂದ ರಾಜ್ಯ ಮಟ್ಟದ ನೇಮಕಾತಿ ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕ್ಯಾಂಪಸ್ ಸಂದರ್ಶನದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಡಿಪ್ಲೋಮಾ ಪಾಸಾದ ಸುಮಾರು 200 ವಿದ್ಯಾರ್ಥಿಗಳು ನೇಮಕಾತಿ ಸಂದರ್ಶನದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ Suzlon Global Energy Limited, Karnataka ಬಹುರಾಷ್ಟ್ರೀಯ ಕಂಪನಿ ಅಧಿಕಾರಿಗಳಾದ ಶ್ರೀ ಜಗದೀಶ ಮುಖ್ಯಸ್ಥರು ಹಾಗೂ ಇತರೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಜರಿದ್ದು, ಕಂಪನಿಯ ಕುರಿತು ಮಾಹಿತಿ ಒದಗಿಸಿ ವಿದ್ಯಾರ್ಥಿಗಳಿಗೆ ಸಂದರ್ಶನ ಜರುಗಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರು, ವಿಭಾಗಾಧಿಕಾರಿಗಳು, ಉದ್ಯೋಗ ಮತ್ತು ತರಬೇತಿ ಅಧಿಕಾರಿಗಳು ಎಲ್ಲ ಸಿಬ್ಬಂದಿಗಳು ಹಾಗೂ ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳು ಹಾಜರಿದ್ದರು.

### ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿದ ಆರ್.ಎಸ್. ಬುರಡಿ

# ಗುಣಾತ್ಮಕ ಶಿಕ್ಷಣದತ್ತ ನಮ್ಮೆಲ್ಲರ ನಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಹಕ್ಕುಗಳ ಕಾಯಿದೆ 2009ರನ್ವಯ 6ರಿಂದ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳನ್ನು ದಾಖಲಾತಿ ಮಾಡಿಕೊಳ್ಳುವಂತೆ, ದಾಖಲಾದ ಎಲ್ಲಾ ಮಕ್ಕಳು ಪ್ರತಿ ದಿನ ಶಾಲೆಗೆ ಹಾಜರಾಗಿ ಆಯಾ ವರ್ಗ ವಿಷಯಕ್ಕೆ ನಿಗದಿಪಡಿಸಿದ ಸಾಮರ್ಥ್ಯಗಳನ್ನು ಮಕ್ಕಳು ಕಲಿಯುವಂತೆ ಶಿಕ್ಷಕರು ಪೂರ್ವ ತಯಾರಿಯೊಂದಿಗೆ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಚಟುವಟಿಕೆ ಆಧಾರಿತ ಪರಿಣಾಮಕಾರಿ ಕಲಿಕಾ ಭೋದನೆ ಪ್ರಕ್ರಿಯೆಯಲ್ಲಿ ತೊಡಗಬೇಕು ಎಂದು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಹೇಳಿದರು.

ಶ್ರೀ ಮಹಾವೀರ ಜೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ 2025-26ನೇ ಸಾಲಿನ ಶಾಲಾ ಪ್ರಾರಂಭೋತ್ಸವ, ವಿಶೇಷ ದಾಖಲಾತಿ ಆಂದೋಲನ ಹಾಗೂ ಎಸ್‌ಎಸ್‌ಎಲ್‌ಸಿ ಫಲಿತಾಂಶ ವಿಶ್ಲೇಷಣೆ ಕುರಿತು ಜಿಲ್ಲೆಯ ಸರಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.




ಮಕ್ಕಳನ್ನು ಆಕರ್ಷಿಸುವ ಹಾಗೆ ಕಲಿಕಾ ವಾತಾವರಣ ಸಿದ್ಧಗೊಳಿಸಿ, ಆಟದ ಮೈದಾನ, ಶೌಚಾಲಯದ ಸ್ವಚ್ಛತೆ, ಶುದ್ಧ ಕುಡಿಯುವ ನೀರಿನ ಸೌಲಭ್ಯಗಳೊಂದಿಗೆ ಮಕ್ಕಳನ್ನು ಶಾಲೆಯತ್ತ ಕೈಬೀಸಿ ಕರೆಯುವ ಹಾಗೆ ಕಲಿಕಾ ವಾತಾವರಣ ನಿರ್ಮಿಸಿ, ಶಾಲಾ ಪ್ರಾರಂಭೋತ್ಸವವನ್ನು ಆಚರಿಸಬೇಕು. ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಪರಿಣಾಮವಾಗಿ ಬೋಧಿಸುವ ಪ್ರಕ್ರಿಯೆಯಲ್ಲಿ ತೊಡಗಬೇಕು ಎಂದು ಆರ್.ಎಸ್. ಬುರಡಿ ಸೂಚಿಸಿದರು.

ಸರಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಶಾಲಾ ವ್ಯಾಪ್ತಿಗೆ ತರಲು ವಿಶೇಷ ದಾಖಲಾತಿ ಆಂದೋಲನ ಪ್ರಾರಂಭಿಸಲಾಗಿದ್ದು, ಜು.31ರವರೆಗೂ ನಡೆಯಲಿದೆ. ದಾಖಲಾತಿ ಆಂದೋಲನವನ್ನು ಜನವಸತಿ, ಶಾಲೆ, ಕ್ಲಸ್ಟರ್, ಬ್ಲಾಕ್, ಜಿಲ್ಲಾ ಹಂತದಲ್ಲಿ ಆಯೋಜಿಸಬೇಕು. ಈ ಪ್ರಕ್ರಿಯೆಯಲ್ಲಿ ಶಿಕ್ಷಕರು, ಎಸ್‌ಡಿಎಂಸಿ ಹಾಗೂ ಸ್ಥಳೀಯರು ಎಲ್ಲ ಮನೆಗಳಿಗೆ ಶಾಲಾ ಅವಧಿಗೆ ಮುನ್ನ ಹಾಗೂ ನಂತರ ಭೇಟಿ ನೀಡಿ, ಪೋಷಕರೊಂದಿಗೆ ಸಮಾಲೋಚನೆ ನಡೆಸಿ ಸರ್ಕಾರದ ಆಶಯ ಹಾಗೂ ಸೌಲಭ್ಯಗಳ ಕುರಿತು ಅರಿವು ಮೂಡಿಸಲು ಸೂಚಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಬಿ.ಎಫ್. ಪೂಜಾರ ಮಾತನಾಡಿ, ಇಲಾಖೆಯ ಅನೇಕ ಒತ್ತಡಗಳಲ್ಲಿಯೂ ನಮ್ಮೆಲ್ಲ ಶಿಕ್ಷಕರ ಪ್ರಯತ್ನದಿಂದ ಗುಣಾತ್ಮಕ ಫಲಿತಾಂಶ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಇಲಾಖಾಧಿಕಾರಿಗಳ ಮಾರ್ಗದರ್ಶನ, ಸತತ ಭೇಟಿಯಿಂದ ಒಳ್ಳೆಯ ಕಲಿಕಾ ವಾತಾವರಣ ಜಿಲ್ಲೆಯಲ್ಲಿ ನಿರ್ಮಾಣವಾಗುತ್ತದೆ ಎಂದು ಹೇಳಿದರು. ಗ್ರಾಮೀಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಜಿಲ್ಲಾ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಎಚ್.ಬಿ. ರಡ್ಡೇರ್ ಫಲಿತಾಂಶ ವಿಶ್ಲೇಷಣೆಯನ್ನು ಮಾಡಿದರು. ಶಿಕ್ಷಣಾಧಿಕಾರಿ ಎಂ.ಎಚ್. ಕಂಬಳಿ ಬಾಲ್ಯ ವಿವಾಹ ಕಾಯ್ದೆ, ತಡೆಗಟ್ಟುವ ಕ್ರಮಗಳು ಕುರಿತು ಮಾತನಾಡಿದರು. ಮಾಧ್ಯಮಿಕ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಎಂ.ಕೆ. ಲಮಾಣಿ ಮಾತನಾಡಿದರು.

ವೇದಿಕೆ ಮೇಲೆ ಗದಗ ಶಹರದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ವಿ. ಶೆಟ್ಟೆಪ್ಪನವರ, ಶರಣಪ್ಪ ನಾಗರಳ್ಳಿ, ಎ.ಎಸ್. ಪಾಟೀಲ, ಲಲಿತ ವಾಣಿಕ್ಯಾಳ, ಸರೋಜಿನಿ ಬಂಡಿವಡ್ಡರ, ಶ್ರೀಧರ್ ಬಡಿಗೇರ, ಚಂದ್ರಕಾಂತ ಕಬಾಡಿ ಉಪಸ್ಥಿತರಿದ್ದರು. ಎಸ್.ಬಿ. ದೊಡ್ಡನವರ ಪ್ರಾರ್ಥಿಸಿದರು. ಶ್ರೀಧರ್ ಬಡಿಗೇರ ಸ್ವಾಗತಿಸಿದರು. ಪ್ರಕಾಶ ಮಂಗಳೂರು ಕಾರ್ಯಕ್ರಮ ನಿರೂಪಿಸಿದರು. ಎಂ.ಎಚ್. ಸವದತ್ತಿ ವಂದಿಸಿದರು.

### ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಹೊರಗುತ್ತಿಗೆ ನೌಕರರ ಅನಿರ್ದಿಷ್ಟಾವಧಿ ಮುಷ್ಕರ

# ಬೇಡಿಕೆ ಈಡೇರುವವರೆಗೆ ಹೋರಾಟ ನಿಲ್ಲದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯ ಎದುರಿನಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ವತಿಯಿಂದ ಪುರಸಭೆ ಎಲ್ಲ ನೌಕರರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ಪ್ರಾರಂಭಿಸಿದರು.

ಈ ವೇಳೆ ಕರ್ನಾಟಕ ರಾಜ್ಯ ಪೌರ ನೌಕರರ ಸಂಘ ರಾಜ್ಯ ಪರಿಷತ್ ಸದಸ್ಯ, ಹಾಗೂ ಲಕ್ಷ್ಮೇಶ್ವರ ಶಾಖಾ ಅಧ್ಯಕ್ಷ ಬಸವಣೆಪ್ಪ ನಂದೆಣ್ಣವರ, ಇನ್ನೊರ್ವ ಮುಖಂಡ ಹನುಮಂತಪ್ಪ ನಂದೆಣ್ಣವರ ಮಾತನಾಡಿ, ಪೌರ ಕಾರ್ಮಿಕರು, ಡ್ರೈವರ್, ಕ್ಲೀನರ್ಸ್, ಲೋಡರ್ಸ್ ಸೇರಿದಂತೆ ಹೊರ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ಎಲ್ಲರನ್ನು ಸರಕಾರ ಖಾಯಂಗೊಳಿಸಬೇಕು ಎನ್ನುವದು ಬಹುದಿನಗಳ ಬೇಡಿಕೆಯಾಗಿದ್ದು, ಸರಕಾರ ಇವರನ್ನು ನಿರ್ಲಕ್ಷಿಸುತ್ತಿದೆ. ಈ ಕುರಿತು ಸಂಘದ ರಾಜ್ಯಾಧ್ಯಕ್ಷರ ಆದೇಶದ ಮೇರೆಗೆ ಸರಕಾರಕ್ಕೆ 45 ದಿನಗಳ ಗಡುವು ನೀಡಲಾಗಿತ್ತು. ಅಲ್ಲಿಯವರೆಗೆ ಕಪ್ಪು ಪಟ್ಟಿ ಧರಿಸಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಕೆಲಸ ಮಾಡುತ್ತ ಹೋರಾಟ ಮಾಡಿದ್ದೇವೆ. ಆದರೆ ಸರಕಾರ ಯಾವುದೇ ಹೋರಾಟಕ್ಕೂ ಸ್ಪಂದನೆ ನೀಡುತ್ತಿಲ್ಲ.




ಸ್ಥಳಕ್ಕೆ ಆಗಮಿಸಿದ ಪುರಸಭೆ ಮುಖ್ಯಾಧಿಕಾರಿ ಮಾತನಾಡಿ, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು, ಜಿಲ್ಲಾಧಿಕಾರಿಗಳು, ಪೌರಾಡಳಿತದ ಅಧಿಕಾರಿಗಳು ಸಭೆ ಸೇರಿ ಪೌರಕಾರ್ಮಿಕರ ಸಂಘದ ಬೇಡಿಕೆಗಳ ಕುರಿತು ಸಚಿವರೊಂದಿಗೆ ಚರ್ಚಿಸಿದ್ದು, ಬರುವ 30ರಂದು ಸಭೆ ಸೇರಿ ಬೇಡಿಕೆಗಳ ಕುರಿತು ಚರ್ಚಿಸುವದಾಗಿ ತಿಳಿಸಿದ್ದಾರೆ. ಅಲ್ಲಿಯವರೆಗೆ ಪ್ರತಿಭಟನೆಯನ್ನು ಸ್ಥಗೀತಗೊಳಿಸುವಂತೆ ತಿಳಿಸಿದರು. ಈ ಮಾತಿಗೆ ಒಪ್ಪದ ಮುಖಂಡರು ಚಿತ್ರದುರ್ಗ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಅಧ್ಯಕ್ಷರು ಪ್ರತಿಭಟನೆ ಕೈಬಿಡಲು ಸೂಚಿಸಿದರೆ ಮಾತ್ರ ಹೋರಾಟದಿಂದ ಹಿಂದೆ ಸರಿಯುತ್ತೇವೆ ಎಂದು ಸ್ಪಷ್ಟಪಡಿಸಿದರು.

ಈಗಾಗಲೇ ಸರಕಾರಕ್ಕೆ ಅನೇಕ ಬಾರಿ ಮನವಿಗಳನ್ನ ಕೊಟ್ಟರೂ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ, ಕೆಲಸವನ್ನು ಸ್ಥಗಿತಗೊಳಿಸಿ ಬೇಡಿಕೆಗಳು ಈಡೇರುವವರೆಗೂ ಅನಿರ್ಧಿಷ್ಟಾವದಿ ಮುಷ್ಕರ ಪ್ರಾರಂಭಿಸಿದ್ದೇವೆ, ಬೇಡಿಕೆ ಈಡೇರುವವರೆಗೆ ಹೋರಾಟ ನಿಲ್ಲದು ಎಂದು ಹೇಳಿದ ಅವರು ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಗೆ ಸಹಕಾರ ನೀಡುವಂತೆ ಮನವಿ ಮಾಡಿದರು.

ಹೋರಾಟಕ್ಕೆ ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಸದಸ್ಯರಾದ ರಮೇಶ ಗಡದವರ, ಮಂಜಕ್ಕ ನಂದೆಣ್ಣವರ ಬೆಂಬಲ ಸೂಚಿಸಿದರು. ಈ ಸಂದರ್ಭದಲ್ಲಿ ದೇವಪ್ಪ ನಂದೆಣ್ಣವರ, ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಸಮುದಾಯ ಸಂಘಟನಾ ಅಧಿಕಾರಿ ಶೋಭಾ ಬೆಳ್ಳಿಕೊಪ್ಪ, ಕಂದಾಯ ಅಧಿಕಾರಿ ನಭಿ ಕಂದಗಲ್, ಎಸ್.ಪಿ. ಲಿಂಬಯ್ಯನಮಠ, ಹೇಮರಾಜ ಅಣ್ಣಿಗೇರಿ, ಸಿದ್ದು ಹಿರೇಮಠ, ಮಹೇಶ ಹೊಸಮನಿ, ನೇತ್ರಾ ಹೊಸಮನಿ, ಅಶೋಕ ನಡಗೇರಿ, ದುರ್ಗಪ್ಪ ಬಾಲಣ್ಣವರ, ನೀಲಪ್ಪ ನಂದೆಣ್ಣವರ, ಮುತ್ತಪ್ಪ ದೊಡ್ಡಮನಿ, ಗೋಣೆಪ್ಪ ಗಡದವರ, ಪರಶುರಾಮ ಮುಳಗುಂದ, ವಿಶ್ವನಾಥ ಹಾದಿಮನಿ ಸೇರಿದಂತೆ ಪೌರಕಾರ್ಮಿಕರು, ಸಿಬ್ಬಂದಿಗಳು ಭಾಗವಹಿಸಿದ್ದರು.

# ಶತಕ ವೀರರ ಮಹಾ ಸಾಧನಾ ಸಮಾವೇಶ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಸಮೀಪದ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದ ಸಭಾ ಭವನದಲ್ಲಿ ನಡೆದ ಭಾರತೀಯ ಜೀವ ವಿಮಾನ ನಿಗಮ ಗದಗ-1ನೇ ಶಾಖೆಯ ಚಂದ್ರೋದಯ ಘಟಕದ ಸಾಧನಾ ಸಮಾವೇಶವನ್ನು ಧಾರವಾಡ ವಿಭಾಗದ ಎಸ್‌ಡಿಎಂ ಬಿ.ಎಸ್. ಚಕ್ರವರ್ತಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಚಂದ್ರೋದಯ ಘಟಕ ಗದಗ ಶಾಖೆಯಲ್ಲಿ ಉನ್ನತ ಮಟ್ಟದ ಸ್ಥಾನ ಪಡೆದು, ಈಗ ಧಾರವಾಡ ವಿಭಾಗ ಮಟ್ಟದಲ್ಲಿ 1ನೇ ಸ್ಥಾನ ಪಡೆದಿದ್ದು, ಈ ಆರ್ಥಿಕ ವರ್ಷದಲ್ಲಿ ವಲಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆಯಲಿ ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಭಿವೃದ್ಧಿ ಅಧಿಕಾರಿ ಸಿ. ಚಂದ್ರಕಾಂತ ಹಾಗೂ ಶಾಖೆಯ ಮ್ಯಾನೇಜರ್ ಎಚ್.ಎಂ. ಭಜಂತ್ರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎಂಎಂ ರತ್ನಪ್ರಭಾ ಅವರು ಶತಕ ವೀರರ ಫೋಟೋ ಇರುವ ಲೋಗೋವನ್ನು ಬಿಡುಗಡೆ ಮಾಡಿದರು. ವಿಭಾಗದ ಮ್ಯಾನೇಜರ್ ವಿಕ್ರಿಯ ಪ್ರಶಾಂತ ಎನ್.ಜಿ. 25 ಶತಕ ವೀರ ಪ್ರತಿನಿಧಿಗಳನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಚಂದ್ರಕಾಂತ್ ದಂಪತಿಗಳು, ಬಿ.ಆರ್. ಕುಲಕರ್ಣಿ, ರಾಜೇಶ್ವರಿ ಕಲಾಲ, ಶಿವಾನಂದ ಬಳಿಗಾರ, ಶೈಲಜಾ ಶೇರವಾಡ, ಮಲ್ಲೇಶ್ ಬಸರಿಮರ, ಸಿದ್ಲಿಂಗನಗೌಡ ಹರ್ತಿ, ಮಾದೇವಿ ಅಂಗಡಿ, ಭರಮಪ್ಪ ಸಾಲಿ, ಉಮೇಶ್ ನವಲಗುಂದ, ವೀರಯ್ಯ ಹಿರೇಮಠ, ಈಶಪ್ಪ ನಾಲ್ಕುರವಿ, ರಾಘವೇಂದ್ರ ಅರರೆ, ಜಗದೀಶ್ ಕೊಲ್ಲಾರಿ, ಗಂಗಾಧರ ಬೆನಕಲ್, ಯಲ್ಲಪ್ಪ ಬಾಬರಿ, ಬಸವರಾಜ್ ಭಜಂತ್ರಿ, ಚೆನ್ನಪ್ಪ ಕುಟುಗನಹಳ್ಳಿ, ಜಗದೀಶ್ ಗೌಡರ, ಜ್ಯೋತಿ ಹಿರೇಮಠ, ಪ್ರಶಾಂತ ಹಟ್ಟಿ, ಜ್ಯೋತಿ ಹಾನಗಲ್, ವಾಣಿಶ್ರೀ ಉಪನಾಳ, ಮಂಜುಳಾ ಇಟಗಿ, ವೀರಣ್ಣ ಕುಬುಸದ, ಪುಷ್ಪವತಿ ಉಕ್ಕಲಿ ಹಾಗೂ ವಿಮಾ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

# ಬೀಜ ವಿತರಣೆಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸರ್ಕಾರಗಳಿಂದ ರೈತರಿಗೆ ರಿಯಾಯಿತಿ ದರದಲ್ಲಿ ಬೀಜ, ಗೊಬ್ಬರವನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ನೀಡುತ್ತಿದ್ದು, ರೈತರು ತಾವು ಈಗಾಗಲೇ ಹೊಂದಿರುವ ಎಫ್‌ಐಡಿ ಸಂಖ್ಯೆಯನ್ನು ಪಡೆದುಕೊಂಡು ಅಗತ್ಯವಿರುವ ಬೀಜ-ಗೊಬ್ಬರವನ್ನು ಪಡೆದುಕೊಳ್ಳಬೇಕು ಎಂದು ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧ್ಯಾನಮಠ ಹೇಳಿದರು.

ಪಟ್ಟಣದ ಅಬ್ಬಿಗೇರಿ ರಸ್ತೆಯಲ್ಲಿರುವ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದಲ್ಲಿ ಸೋಮವಾರ ಮುಂಗಾರು ಹಂಗಾಮಿನ ಬೀಜ, ಗೊಬ್ಬರ ವಿತರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕೃಷಿ ಇಲಾಖೆಯಿಂದ ಮುಂಗಾರು ಎದುರಿಸಲು ಸಜ್ಜುಗೊಂಡಿದ್ದು, ರೈತರಿಗೆ ಅಗತ್ಯವಿರುವ ಹೆಸರು, ಮೆಕ್ಕೆಜೋಳ ಸೇರಿದಂತೆ ವಿವಿಧ ಬೆಳೆಗಳ ಬೀಜವನ್ನು ದಾಸ್ತಾನು ಮಾಡಲಾಗಿದೆ. ಅಗತ್ಯಕ್ಕೆ ತಕ್ಕಂತೆ ವಿತರಣೆ ಮಾಡಲಾಗುತ್ತದೆ. ಆದ್ದರಿಂದ ಹೋಬಳಿ ವ್ಯಾಪ್ತಿಯ ರೈತರು ಆರ್‌ಎಸ್‌ಕೆಯಲ್ಲಿ ದೊರೆಯ ಬೀಜ ಗೊಬ್ಬರವನ್ನು ಖರೀದಿಸಲು ಮುಂದಾಗಬೇಕು ಎಂದರು.



ರೋಣ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ರವೀಂದ್ರಗೌಡ ಪಾಟೀಲ ಮಾತನಾಡಿ, ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿಎಪಿ ರಸಗೊಬ್ಬರವನ್ನು ರೈತರು ರೂಢಿಗತವಾಗಿ ಬಳಸುತ್ತಿದ್ದಾರೆ. ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಹಾಗಾಗಿ ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯಕ್ತ ರಸಗೊಬ್ಬರ ಬಳಸಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಶರಣಯ್ಯ ಮುಸ್ತಗಟ್ಟಿ, ಶರಣಪ್ಪ ಬೆಟಗೇರಿ, ನರೇಗಲ್ಲ ಕೃಷಿ ಅಧಿಕಾರಿ ಬಸವರಾಜ ಗದಗಿನ, ಸಿ.ಕೆ. ಕಮ್ಮಾರ, ಮುದಕಪ್ಪ ಬೆಟಗೇರಿ, ಶಿವನಗೌಡ ಪಾಟೀಲ, ಚನ್ನಸಪ್ಪ ಹಡಪದ, ಬಸಪ್ಪ ಹೊಗರಿ, ಚನ್ನಬಸಪ್ಪ ಕುಷ್ಟಗಿ, ಶಿವಕುಮಾರ ಮಾವಿನಕಾಯಿ, ಸಿಬ್ಬಂದಿ ಬಾಬು ರಾಜೂರ, ಬಸವರಾಜ ರೊಟ್ಟಿ, ಅನ್ನಪೂರ್ಣ ಗಿರಡ್ಡಿ, ಸಿದ್ದು ಸೊಲಗಿ, ಶಿಲ್ಪಾ ಕಟಗೇರಿ, ಶರಣಪ್ಪ ಸಜ್ಜನ ಸೇರಿದಂತೆ ಇತರರಿದ್ದರು.

# ನಕಲಿ ಡಿಎಪಿ ಗೊಬ್ಬರ ವಶಕ್ಕೆ




■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಮಾಡಲಗೇರಿ ಗ್ರಾಮದಲ್ಲಿ 500ಕ್ಕೂ ಹೆಚ್ಚು ಚೀಲಗಳಷ್ಟು ನಕಲಿ ಡಿಎಪಿ ಗೊಬ್ಬರ ಮಾರಾಟವಾಗಿರುವುದು ಬೆಳಕಿಗೆ ಬಂದಿದ್ದು, ಬೆಳಗಾಂವ ವಿಭಾಗದ ಕೃಷಿ ಅಧಿಕಾರಿಗಳು ದಾಳಿ ನಡೆಸಿ ನಕಲಿ ಗೊಬ್ಬರವನ್ನು ವಶಪಡಿಸಿಕೊಂಡು ಪ್ರಯೋಗಾಲಯಕ್ಕೆ ಕಳುಹಿಸಿದ ಘಟನೆ ಮಂಗಳವಾರ ವರದಿಯಾಗಿದೆ.

ಬೆಳಗಾಂವ ವಿಭಾಗದ ಜಾಗೃತ ದಳದ ಹಿರಿಯ ಅಧಿಕಾರಿಗಳಾದ ರಾಜಶೇಖರ ಐ.ಬಿಜಾಪೂರ, ಮಾಂತೇಶ ಕಿನಗಿ, ಎಂ.ಎಂ. ಕುಲಕರ್ಣಿ ನೇತೃತ್ವದ ತಂಡ ಗ್ರಾಮದಲ್ಲಿ ನಕಲಿ ಗೊಬ್ಬರ ಪೂರೈಕೆ ಮಾಡುತ್ತಿದ್ದ ಕಿಸಾನ್ ಅಭಿವೃದ್ಧಿ ಸಂಸ್ಥೆಯ ಗೋದಾಮಿನ ಮೇಲೆ ದಾಳಿ ನಡೆಸಿ, ನಕಲಿ ಗೊಬ್ಬರ ಪೂರೈಕೆಯನ್ನು ಸ್ಥಗಿತಗೊಳಿಸಿದ್ದಾರೆ.

ಸರಕಾರ ಮಾರಾಟ ಮಾಡುವ ಡಿಎಪಿ ಗೊಬ್ಬರ ಬೇರೆಯಾಗಿದ್ದು, ಈ ಸಂಸ್ಥೆಯವರು ಮಾರಾಟ ಮಾಡುತ್ತಿದ್ದ ಗೊಬ್ಬರ ಬೇರೆಯಾಗಿದೆ. ಹೊರನೋಟಕ್ಕೆ ಈ ವ್ಯತ್ಯಾಸ ತಿಳಿಯದೇ ಸಾವಿರಕ್ಕೂ ಹೆಚ್ಚು ರೈತರು ಗೊಬ್ಬರವನ್ನು ಖರೀದಿ ಮಾಡಿರುವ ಬಗ್ಗೆ ತಿಳಿದುಬಂದಿದೆ.

ಈ ದಾಳಿಯಲ್ಲಿ ವಶಪಡಿಸಿಕೊಳ್ಳಲಾಗಿರುವ ನಕಲಿ ಗೊಬ್ಬರವನ್ನು ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿದ್ದು, ವರದಿ ಬಂದ ತಕ್ಷಣ ಕ್ರಮ ತೆಗೆದುಕೊಳ್ಳಲಾಗುವುದು. ಜೊತೆಗೆ ತಾಲೂಕಿನ ರೈತರು ನಕಲಿ ಗೊಬ್ಬರದ ಕುರಿತು ಎಚ್ಚರಿಕೆ ವಹಿಸಬೇಕು, ನಕಲಿ ಎಂಬ ಅನುಮಾನ ಬಂದರೆ ಇಲಾಖೆಗೆ ಮಾಹಿತಿ ನಿಡಬೇಕು ಎಂದು ರೋಣ ಸಹಾಯಕ ಕೃಷಿ ನಿರ್ದೇಶಕ ರವೀಂದ್ರ ಪಾಟೀಲ ತಿಳಿಸಿದ್ದಾರೆ.



ಡಂಬಳ ಹೋಬಳಿಯ ಗ್ರಾಮಗಳಲ್ಲಿ ಸೋಮವಾರ ರಾತ್ರಿ ಬೀಸಿದ ಗಾಳಿ-ಮಳೆಗೆ ಗಿಡ, ಮರಗಳು ನೆಲಕಚ್ಚಿದ್ದು, ಅಲ್ಲಲ್ಲಿ ಬೆಳೆ ನಷ್ಟಕ್ಕೂ ಕಾರಣವಾಗಿದೆ. ಗ್ರಾಮದ ಗೌಸಿದ್ದಪ್ಪ ಸಂಜೀವಣ್ಣವರ ಲಕ್ಷಾಂತರ ರೂ ಖರ್ಚು ಮಾಡಿ ಡ್ರ್ಯಾಗನ್ ಫ್ರುಟ್ ಬೆಳೆದಿದ್ದರು. ಇದೀಗ ಫಸಲು ಬಿಡುವ ಸಮಯದಲ್ಲಿ ಜೋರಾಗಿ ಗಾಳಿ ಬೀಸಿದ ಪರಿಣಾಮ ಗಿಡಗಳು ನೆಲಕಚ್ಚಿ ಲಕ್ಷಾಂತರ ರೂ ಹಾನಿ ಉಂಟಾಗಿದೆ.

# ರಾಜ್ಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆ

▶▶ಮೊದಲನೇ ಪುಟದಿಂದ

ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಛಿಸುವವರು https://forms.gle/Ua6kvDeUTWW5ytZx9 ಈ ಲಿಂಕ್ ಮೂಲಕ ಹೆಸರು ನೋಂದಾಯಿಸಿಕೊಳ್ಳಬೇಕು. ಹೆಸರು ನೋಂದಾಯಿಸಿಕೊಳ್ಳಲು ಕೊನೆಯ ಮೇ. 30 ಆಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 7899348764, 9844442701, 9448317188 ಸಂಪರ್ಕಿಸಬಹುದು ಎಂದು ಗದಗ ಜಿಲ್ಲಾ ಅಮೇಚೂರ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಗದಗ ಅಧ್ಯಕ್ಷ ಕೆ.ಎಸ್. ಪಲ್ಲೇದ ಮತ್ತು ಕಾರ್ಯದರ್ಶಿ ಚೇತನ ಚುಂಚಾ ವಿನಂತಿಸಿದ್ದಾರೆ.

# ಉರ್ದು ವಿಚಾರದಲ್ಲಿ ಬಿಜೆಪಿ ಕೋಮುವೈಷಮ್ಯ ಹರಡುತ್ತಿದೆ: ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡ ಭಾಷೆಯನ್ನು ನಿರ್ಲಕ್ಷಿಸಿ ಉರ್ದು ಭಾಷೆಗೆ ರಾಜ್ಯ ಸರ್ಕಾರ ಹೆಚ್ಚಿನ ಅನುದಾನ ನೀಡುತ್ತಿದೆ ಎಂದು ರಾಜ್ಯ ಬಿಜೆಪಿ ಮಾಡುತ್ತಿರುವ ಅಪಪ್ರಚಾರ ಸಂಪೂರ್ಣ ಸತ್ಯಕ್ಕೆ ದೂರವಾಗಿದ್ದು, ಕೋಮುವೈಷಮ್ಯ ಹುಟ್ಟಿಸುವ ದುರುದ್ದೇಶದಿಂದ ಕೂಡಿದ್ದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಹೇಳಿದ್ದಾರೆ. ಒಂದು ರಾಷ್ಟ್ರೀಯ ಪಕ್ಷ ಇಷ್ಟೊಂದು ಬೇಜವಾಬ್ದಾರಿತನದಿಂದ ಕಿಡಿಗೇಡಿ ಟ್ರೋಲರ್‌ಗಳ ರೀತಿ ಸುಳ್ಳು ಸುದ್ದಿಯನ್ನು ಪ್ರಚಾರ ಮಾಡುತ್ತಿರುವುದು ವಿಷಾದನೀಯ ಎಂದು ಅವರು ಹೇಳಿದ್ದಾರೆ.

# ಪೌರಕಾರ್ಮಿಕರಿಂದ ಅನಿರ್ದಿಷ್ಟಾವಧಿ ಮುಷ್ಕರ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪೌರಕಾರ್ಮಿಕರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ರಾಜ್ಯ ಸಂಘ ನಡೆಸುತ್ತಿರುವ ಅನಿರ್ದಿಷ್ಟ ಮುಷ್ಕರ ಬೆಂಬಲಿಸಿ ಮುಳಗುಂದ ಪಟ್ಟಣದ ಪ.ಪಂ ಮುಂಭಾಗದ ಆವರಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಮಹಾತ್ಮ ಗಾಂಧಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಪೌರಕಾರ್ಮಿಕರು ಅನಿರ್ದಿಷ್ಟ ಮುಷ್ಕರ ನಡೆಸಿದರು.

ಪಟ್ಟಣದ ಪಂಚಾಯಿತಿಯ ಎಲ್ಲಾ ಕಾರ್ಯಗಳನ್ನು ಸ್ಥಗಿತಗೊಳಿಸಿ ಮುಷ್ಕರಕ್ಕೆ ಬೆಂಬಲ ನೀಡಿದ್ದು, ಪಟ್ಟಣದ ಸ್ವಚ್ಛತೆ ಸೇರಿದಂತೆ ಯಾವುದೇ ಕೆಲಸ ಕಾರ್ಯಗಳನ್ನು ಮಾಡುವುದಿಲ್ಲ ಎಂದು ಪೌರಕಾರ್ಮಿಕ ಸಂಘದ ಸ್ಥಳೀಯ ಘಟಕದ ಅಧ್ಯಕ್ಷ ನೀಲಪ್ಪ ದೊಡ್ಡಮನಿ ಹೇಳಿದರು.



ಪ.ಪಂ ಆರ್‌ಐ ಇಮಾಮಸಾಬ ಕಾಲನಾಯ್ಕ, ಸದಸ್ಯ ಬಸವರಾಜ ಹಾರೋಗೇರಿ ಪೌರಕಾರ್ಮಿಕರ ಮನವಿ ಸ್ವೀಕರಿಸಿ ಮಾತನಾಡಿ, ಪೌರಕಾರ್ಮಿಕರು ಮುಳಗುಂದ ಪಟ್ಟಣದ ಸ್ವಚ್ಛತೆಗಾಗಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಇಂತಹ ಕಾರ್ಮಿಕರ ಬೇಡಿಕೆ ಈಡೇರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಪರಶುರಾಮ ದೊಡ್ಡಮನಿ, ಸುಭಾಷ ದೊಡ್ಡಮನಿ, ರಮೇಶ ಮ್ಯಾಗೇರಿ, ಮಾಹಾಂತೇಶ ಮ್ಯಾಗೇರಿ, ಹನುಮಂತ ಮ್ಯಾಗೇರಿ, ಪರಶುರಾಮ ಸಣ್ಣತಮ್ಮನವರ, ಅನಿಲ ಕರಿಯಮ್ಮನವರ ಮುಂತಾದವರಿದ್ದರು.

ಶಿವಪ್ರಿಯಾನಂದ ಸ್ವಾಮೀಜಿ ಅವರ ಪುರಪ್ರವೇಶ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ

# ಬ್ರಹ್ಮಚರ್ಯ ಆಚರಣೆ ಅತ್ಯಂತ ಕಠಿಣ



■ವಿಜಯಸಾಕ್ಷಿ ಸುದ್ದಿ, ಗದಗ

ಜೀವನದಲ್ಲಿ ಅತ್ಯಂತ ಕಠಿಣವಾದುದು ಬ್ರಹ್ಮಚರ್ಯ ಆಚರಣೆ ಹಾಗೂ ಸನ್ಯಾಸತ್ವ ಸ್ವೀಕರಿಸುವುದು. ಸ್ವಾಮಿ ವಿವೇಕಾನಂದರ ತತ್ವಸಿದ್ಧಾಂತಗಳಿಂದ ಪ್ರಭಾವಕ್ಕೆ ಒಳಗಾಗಿ ಸನ್ಯಾಸತ್ವ ಪಡೆದಿರುವ ಶಿವಪ್ರಿಯಾನಂದ ಸ್ವಾಮೀಜಿ ಅವರು ಇನ್ನು ಮುಂದೆ ಎಚ್ಚರಿಕೆಯಿಂದ ಹೆಜ್ಜೆ ಇಡಬೇಕಾದ ಜೀವನವಾಗಿರುತ್ತದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಶ್ರೀ ರಾಮಕೃಷ್ಣ ವಿವೇಕಾನಂದಾಶ್ರಮದ ಶಿವಪ್ರಿಯಾನಂದ ಸ್ವಾಮೀಜಿ (ಪುನೀತ ಮಹಾರಾಜ) ಸನ್ಯಾಸ ಸ್ವೀಕರಿಸಿದ ನಂತರ ಮಂಗಳವಾರ ಹಮ್ಮಿಕೊಂಡಿದ್ದ ಪುರಪ್ರವೇಶ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಶಿವಾನಂದ ಬೃಹನ್ಮಠದ ಅಭಿನವ ಶಿವಾನಂದ ಸ್ವಾಮೀಜಿ ಮಾತನಾಡಿ, ಮನುಷ್ಯನ ಜೀವನದಲ್ಲಿ ಹಿಂದಿನ ಜನ್ಮದ ಪುಣ್ಯದ ಫಲದಿಂದ ವೈರಾಗ್ಯ ಜೀವನ ಬರುತ್ತದೆ. ಸತ್ಸಂಗ, ಮಹಾತ್ಮರ ಸಹವಾಸದಲ್ಲಿ ತೆ-ೂಡಗಿದಾಗ ವೈರಾಗ್ಯ, ಸದ್ಗುಣ, ಸಂಪನ್ನ, ವಿನಯಶೀಲತೆಯಂತಹ ಗುಣಗಳು ಪ್ರಸನ್ನವಾಗುತ್ತವೆ. ನಿರ್ಭಯಾನಂದ ಸ್ವಾಮೀಜಿ ಅವರ ಮಾರ್ಗದರ್ಶನದಲ್ಲಿ ಶಿವಪ್ರಿಯಾನಂದ ಸ್ವಾಮೀಜಿ ಅವರು ಸಮಾಜವನ್ನು ಉದ್ಧರಿಸುವ ಮೂಲಕ ಜನರಿಗೆ ಉತ್ತಮ ಸಂದೇಶಗಳನ್ನು ನೀಡಲಿ ಎಂದು ಹಾರೈಸಿದರು.

ರಾಣೆಬೆನ್ನೂರಿನ ಪ್ರಕಾಶಾನಂದ ಸ್ವಾಮೀಜಿ ಮಾತನಾಡಿ, ಸನ್ಯಾಸ ಎನ್ನುವುದು ಆದರ್ಶ. ಇಂದಿನ ಕಾಲಘಟ್ಟದಲ್ಲಿ ಇಂದಿನ ಸನ್ಯಾಸಿಗಳಿಗೂ ಆದರ್ಶಗಳನ್ನು ಅಗಾಗ ನೆನಪಿಸಿಕೊಡುವುದು ಅನಿವಾರ್ಯವಾಗಿದೆ. ದೇಶ ಉದ್ಧಾರವಾಗಲು ತ್ಯಾಗ ಮತ್ತು ಸೇವೆ ಎಂಬ ಆದರ್ಶಗಳನ್ನು ಇಟ್ಟುಕೊಳ್ಳಬೇಕು ಎಂದು ಸ್ವಾಮಿ ವಿವೇಕಾನಂದರು ತಿಳಿಸಿಕೊಟ್ಟಿದ್ದಾರೆ. ಸ್ವಾಮಿ ವಿವೇಕಾನಂದ ಅವರ ಆದರ್ಶಗಳನ್ನೇ ಪರಿಪಾಲಿಸಿಕೊಂಡು ಬಂದಿರುವ, ಸನ್ಯಾಸತ್ವ ಸ್ವೀಕರಿಸಿರುವ ಶಿವಪ್ರಿಯಾನಂದ ಸ್ವಾಮೀಜಿ ಅವರು ದೇಶದ ಸೇವೆಗೆ ತಮ್ಮನ್ನು ತಾವು ಅರ್ಪಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿ, ಶಿವಪ್ರಿಯಾನಂದ ಸ್ವಾಮೀಜಿ ಅವರು ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸರ ತತ್ವಾದರ್ಶಗಳನ್ನು ಅಳವಡಿಸಿಕೊಂಡು, ಬದ್ಧತೆ ಹೊಂದಿ, ತಮ್ಮ ಬ್ರಹ್ಮಚರ್ಯ ಜೀವನದಲ್ಲಿ ಹಲವು ಪ್ರಯೋಗಗಳನ್ನು ಮಾಡಿ, ಸನ್ಯಾಸತ್ವ ಸ್ವೀಕರಿಸಿ ಆಗಮಿಸಿದ್ದಾರೆ ಎಂದು ಹೇಳಿದರು.

ಗದಗ-ವಿಜಯಪುರ ಶ್ರೀ ರಾಮಕೃಷ್ಣ ವಿವೇಕಾನಂದಾಶ್ರಮದ ಅಧ್ಯಕ್ಷ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಮಾತನಾಡಿ, ಮಂತ್ರ-ಜಪ, ರಾಮಕೃಷಾಶ್ರಮದ ಹಿರಿಯ ಸನ್ಯಾಸಿಗಳ ಮಾರ್ಗದರ್ಶನ, ಸೇವಾಕಾರ್ಯ, ಸ್ವಾಮಿ ವಿವೇಕಾನಂದರ ಪುಸ್ತಕಗಳ ನಿರಂತರ ಅಧ್ಯಯನ, ಸಾಧು ಸೇವೆ-ಸಾಧು ಸಂಘದಲ್ಲಿ ನಿರತರಾಗಿದ್ದ ಪುನೀತ ಮಹಾರಾಜ ಈಗ ಹರಿದ್ವಾರದಲ್ಲಿ ಸನ್ಯಾಸ ದೀಕ್ಷೆ ಪಡೆದು ಶಿವಪ್ರಿಯಾನಂದ ಸ್ವಾಮೀಜಿಯಾಗಿ, ಹಿಮಾಲಯದಲ್ಲಿ ಸಾಧು-ಸಂತರ ಆಶೀರ್ವಾದ ಪಡೆದು ಗದಗ ನಗರಕ್ಕೆ ಪುರ ಪ್ರವೇಶ ಮಾಡಿದ್ದಾರೆ ಎಂದು ಹೇಳಿದರು.

> ಗದಗ ಸತ್ವಯುತ ಭೂಮಿಯಾಗಿದ್ದು, ಸಾಕಷ್ಟು ಸಂತರನ್ನು, ಶ್ರೇಷ್ಠರನ್ನು ಮಹಾತ್ಮರನ್ನು ಆಕರ್ಷಿಸಿದೆ. ಪಂಡಿತ ಪಂಚಾಕ್ಷರ, ಪಂಡಿತ ಪುಟ್ಟರಾಜ ಗವಾಯಿಗಳು ಈ ಭಾಗಕ್ಕೆ ವಿಶೇಷ ಮೆರುಗನ್ನು ತಂದುಕೊಟ್ಟಿದ್ದಾರೆ. ಅದೇ ರೀತಿ, ಹೊಸಳ್ಳಿ ಬೂದೀಶ್ವರ ಸ್ವಾಮೀಜಿ, ಶೇಷಾವಧೂತರು, ಚಿದಾನಂದ ಸ್ವಾಮೀಜಿ, ಶಿವಾನಂದ ಸ್ವಾಮೀಜಿ, ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಸೇರಿ ಅನೇಕ ಸ್ವಾಮೀಜಿಗಳು ಸತ್ವಯುತ ಭೂಮಿಯ ಶ್ರೇಷ್ಠತೆಯನ್ನು ಮೆರೆದಿದ್ದಾರೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಮಾಜಿ ಶಾಸಕರಾದ ಬಿ.ಆರ್. ಯಾವಗಲ್ ಅಧ್ಯಕ್ಷತೆ ವಹಿಸಿದ್ದರು. ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತಾ ದೊಡ್ಡಮನಿ, ಪ್ರಭಣ್ಣ ಹುಣಸಿಕಟ್ಟಿ, ವಾಸಣ್ಣ ಕುರಡಗಿ, ಸಿದ್ಧಲಿಂಗೇಶ್ವರ ಪಾಟೀಲ, ಜಿಪಂ ಮಾಜಿ ಸದಸ್ಯರಾದ ಹನಮಂತಪ್ಪ ಪೂಜಾರ, ಶಕುಂತಲಾ ಮೂಲಿಮನಿ, ಗದಗ-ಬೆಟಗೇರಿ ನಗರಸಭೆ ಚುನಾಯಿತ ಅಧ್ಯಕ್ಷ ಕೃಷ್ಣ ಪರಾಪೂರ, ಉಪಾಧ್ಯಕ್ಷೆ ಶಕುಂತಲಾ ಅಕ್ಕಿ, ಮುಖಂಡರಾದ ಫಕ್ಕೀರಪ್ಪ ಹೆಬಸೂರ, ರಾಮಣ್ಣ ಫಲದೊಡ್ಡಿ, ಹನುಮಂತಪ್ಪ ಗರಗ, ಅಪ್ಪಣ್ಣ ಇನಾಮತಿ, ವಿವೇಕ ಯಾವಗಲ್, ಚನಪ್ಪ ಜಗ್ಗಲಿ ಸೇರಿ ಜಿಲ್ಲೆಯ ಪ್ರಮುಖರು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾಧರ ದೊಡ್ಡಮನಿ, ಬಿ.ಆರ್. ದೇವರಡ್ಡಿ, ಶರಣಪ್ಪಗೌಡ ಪಾಟೀಲ, ರಾಜೇಂದ್ರ ಗೊಡಬೋಲೆ, ರುದ್ರಮ್ಮ ಕೆರಕಲಮಟ್ಟಿ, ಶ್ರೀನಿವಾಸ ಹುಯಿಲಗೋಳ, ಶಿವಲೀಲಾ ಅಕ್ಕಿ, ಜಿ.ವಿ. ಬಳಗಾನೂರ, ಪ್ರಭು ಬುರಬುರೆ, ಶಿವಣ್ಣ ನೀಲಗುಂದ, ಚನ್ನಪ್ಪ ಜಗಲಿ, ಬಸವರಾಜ ಸುಂಕಾಪೂರ, ನೀಲಮ್ಮ ಬೋಳನವರ, ಕೃಷ್ಣಗೌಡ ಪಾಟೀಲ, ಎಸ್.ವೈ. ಚಿಕ್ಕಟ್ಟಿ, ರವಿ ಮೂಲಿಮನಿ, ಷಣ್ಮುಖಪ್ಪ ಬಡ್ನಿ, ಆರ್.ಎನ್. ದೇಶಪಾಂಡೆ, ಮಲ್ಲಪ್ಪ ಕಲಗುಡಿ, ಸಿ.ಬಿ. ದೊಡ್ಡಗೌಡರ, ಸಿ.ಬಿ. ಕರಿಕಟ್ಟಿ, ಎನ್.ಎಸ್. ಹಿರೇಮನಿಪಾಟೀಲ, ಶಿವಾನಂದ ಮಾದಣ್ಣವರ, ಶಿವಪ್ಪ ಸಿಂಗಟಾಲಕೇರಿ, ರಾಮಚಂದ್ರ ಕುಲಕರ್ಣಿ, ಶಿವಕುಮಾರ ಶಿವನಗುತ್ತಿ ಇದ್ದರು. ಜೆ.ಕೆ. ಜಮಾದಾರ ನಿರ್ವಹಿಸಿದರು.

ಗದಗ-ಬೆಟಗೇರಿ ನಗರಸಭೆಯ ಪೌರ ನೌಕರರ ಅನಿರ್ದಿಷ್ಟಾವಧಿ ಮುಷ್ಕರ

# ಪ್ರಮುಖ ಬೇಡಿಕೆಗಳನ್ನು ಈಡೇರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ನಿರ್ದೇಶನದಂತೆ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆ/ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮಂಗಳವಾರ ಗದಗ-ಬೆಟಗೇರಿ ನಗರಸಭೆಯ ಪೌರ ನೌಕರರು ಅನಿರ್ದಿಷ್ಟಾವಧಿ ಮುಷ್ಕರವನ್ನು ಪ್ರಾರಂಭಿಸಿದರು.

ರಾಜ್ಯ ಸರ್ಕಾರ ಪೌರ ವೃಂದದ ನೌಕರರ ಪ್ರಮುಖ ಬೇಡಿಕೆಗಳಾದ ಪೌರ ನೌಕರರನ್ನು ಸರ್ಕಾರಿ ನೌಕರರೆಂದು ಘೋಷಿಸುವುದು, ಸರ್ಕಾರಿ ನೌಕರರಿಗೆ ಸಿಗುವ ಸೌಲಭ್ಯವನ್ನು ಪೌರ ನೌಕರರಿಗೂ ಜಾರಿ ಮಾಡುವುದು, ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರು, ಲೋಡರ್ಸ್, ಘನತಾಜ್ಯ ವಾಹನ ಚಾಲಕರು, ಕ್ಲೀನರ್ಸ್, ಸೂಪರವೈಸರ್, ನೀರು ಸರಬರಾಜು ಸಿಬ್ಬಂದಿಗಳು, ಕಂಪ್ಯೂಟರ ಆಪರೇಟರ್, ಜೂನಿಯರ್ ಪ್ರೋಗ್ರಾಮರ್ ಇನ್ನಿತರೆ ಸಿಬ್ಬಂದಿಗಳಿಗೆ ನೇರಪಾವತಿ ವೇತನ ಮಾಡುವುದು, ಖಾಯಂ ಮಾಡುವುದು ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು. ಈ ಮುಷ್ಕರದಲ್ಲಿ ಶಾಖಾ ಅಧ್ಯಕ್ಷರಾದ ಚಂದ್ರಶೇಖರ ಹಾದಿಮನಿ, ಉಪಾಧ್ಯಕ್ಷ ಪಂಚಾಕ್ಷರಿ ಬಿ. ದೊಡ್ಡಮನಿ, ಆಂಜನೇಯ ಎನ್.ಬಳ್ಳಾರಿ, ಆಂಜನೇಯ ಪೂಜಾರ, ನಾಗೇಶ ಗೂರಣ್ಣವರ, ಪರಶುರಾಮ ಎಫ್. ಶೇರಖಾನೆ, ಜಿಲ್ಲಾ ನಿರ್ದೇಶಕರಾದ ಕೆಂಚಪ್ಪ ಎಫ್.ಪೂಜಾರ, ಸಣ್ಣಪ್ಪ ಎನ್.ಬೋಳಮ್ಮನವರ, ಎಮ್. ಎಮ್. ಮಕಾನದಾರ, ಪ್ರಮುಖರಾದ ಹೇಮೇಶ ಯಟ್ಟಿ, ನಾಗರಾಜ ಬಳ್ಳಾರಿ, ವಿಠ್ಠಲ ಪರಾಪೂರ, ಅರವಿಂದ ಕುರ್ತಕೋಟಿ, ಶೇಖಪ್ಪ ತಮ್ಮಣ್ಣವರ, ಶಿವು ಜಂಬಲದಿನ್ನಿ, ಕೆಂಚಪ್ಪ ಪೂಜಾರ, ಸಣ್ಣಪ್ಪ ಬೋಳಮ್ಮನವರ, ಹನಮಂತ ಡಿ. ಮಲ್ಲಿಕ ಸಂಗಾಪೂರ, ಮುತ್ತು ಯಲ್ಲಾಕ್ಕನವರ, ಸಣ್ಣರಾಮಪ್ಪ ಬಳ್ಳಾರಿ, ನಾರಾಯಣ ಬಳ್ಳಾರಿ, ಆಂಜನಯ್ಯ ಪೂಜಾರ, ಮಂಜು ನರಗುಂದ, ಮುತ್ತು ಚಲವಾದಿ, ಮಂಜು ಚಲವಾದಿ, ಶಿವಲಿಂಗಪ್ಪ ಸೋಂಪೂರ, ಮಂಜು ಯಲ್ಲಪಲ್ಲೆ, ಸಂಗವ್ವ ಸೋಂಪೂರ ಸೇರಿದಂತೆ ಗದಗ-ಬೆಟಗೇರಿ ನಗರಸಭೆ ಹೊರಗುತ್ತಿಗೆ ಪೌರಕಾರ್ಮಿಕರು, ನೌಕರರು ಪಾಲ್ಗೊಂಡಿದ್ದರು.

> ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ, ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮತ್ತು ಗದಗ ತಹಸೀಲ್ದಾರರು, ಯೋಜನಾ ನಿರ್ದೇಶಕರು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಪ್ರತಿಭಟನಾಕಾರರ ಬೇಡಿಕೆಗಳನ್ನು ಶೀಘ್ರವೇ ಬಗೆಹರಿಸುವುದಾಗಿ ಭರವಸೆ ನೀಡಿದರಲ್ಲದೆ, ಗದಗ-ಬೆಟಗೇರಿ ನಗರಸಭೆ ಆಯುಕ್ತರು, ಲಕ್ಷ್ಮೇಶ್ವರ, ಮುಂಡರಗಿ, ರೋಣ, ನರಗುಂದ, ಶಿರಹಟ್ಟಿ, ಮುಳಗುಂದ ಮುಖ್ಯಾಧಿಕಾರಿಗಳು ಭೇಟಿ ನೀಡಿ ಮುಷ್ಕರ ಕುಳಿತ ನೌಕರರ ಬೇಡಿಕೆಗಳನ್ನು ಆಲಿಸಿ, ಸರ್ಕಾರದ ಗಮನಕ್ಕೆ ತರುವುದಾಗಿ ತಿಳಿಸಿದರು.

# ಪ್ರೊ. ಬಿ. ಕೃಷ್ಣಪ್ಪ ಸಭಾಭವನ ನಿರ್ಮಿಸಲು ಒತ್ತಾಯ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ದಲಿತ ಸಂಘರ್ಷ ಸಮಿತಿ, (ಅಂಬೇಡ್ಕರವಾದ) ಗದಗ ಜಿಲ್ಲಾ ಸಮಿತಿಯ ವತಿಯಿಂದ ದ.ಸಂ.ಸ ಸಂಸ್ಥಾಪಕರಾದ ಪ್ರೊ. ಬಿ. ಕೃಷ್ಣಪ್ಪ ಹೆಸರಿನಲ್ಲಿ ಸಭಾಭವನ ನಿರ್ಮಿಸುವಂತೆ ಸಚಿವರಾದ ಹೆಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಲಾಯಿತು.

ಸಮಿತಿಯ ಗದಗ ಜಿಲ್ಲಾ ಘಟಕದ ಪ್ರದಾನ ಸಂಚಾಲಕ ಬಾಲರಾಜ ಅರಬರ ಮಾತನಾಡಿ, ರಾಜ್ಯದ ಎಲ್ಲಾ ಶೋಷಿತ ಸಮುದಾಯಗಳು ಹಾಗೂ ದಲಿತ ಸಮುದಾಯಗಳ ಹಿತದೃಷ್ಟಿಯಿಂದ ಗದಗದಲ್ಲಿ ಬಹುಜನರ ವಿಮೋಚಕ ಹಾಗೂ ದ.ಸಂ.ಸ. ಸಂಸ್ಥಾಪಕರಾದ ಪ್ರೊ. ಬಿ. ಕೃಷ್ಣಪ್ಪ ಹೆಸರಿನಲ್ಲಿ ಒಂದು ಸಭಾಭವನ ನಿರ್ಮಿಸಬೇಕು. ದಲಿತರ ಮೇಲಿನ ಶತಮಾನಗಳ ದಬ್ಬಾಳಿಕೆ ದೌರ್ಜನ್ಯಗಳಿಗೆ ಪ್ರತಿರೋಧದ ಶಕ್ತಿಯಾಗಿ ಜಾತಿವಾದಿಗಳ, ಕೋಮುವಾದಿಗಳ ಎದೆಯಲ್ಲಿ ದ.ಸಂ.ಸ ನಡುಕು ಹುಟ್ಟಿಸಿತು. ಧಮನಿತ ಸಮುದಾಯಗಳಲ್ಲಿ ಹೋರಾಟದ ಕಿಚ್ಚು ಹಚ್ಚಿತು.


ಪ್ರೊ. ಬಿ. ಕೃಷ್ಣಪ್ಪನವರ ನಾಯಕತ್ವದಲ್ಲಿ ದ.ಸಂ.ಸ. ಇಡೀ ರಾಜ್ಯಾದ್ಯಂತ ಕೋಟಿಗಟ್ಟಲೇ ಕಾರ್ಯಕರ್ತರನ್ನು ಒಗ್ಗೂಡಿಸಿಕೊಂಡು ನೊಂದ, ಶೋಷಿತ ಸಮುದಾಯಗಳಿಗೆ ವಿಮೋಚನೆ ನೀಡಿದೆ. ಕೃಷ್ಣಪ್ಪನವರು ಕರ್ನಾಟಕ ರಾಜ್ಯ ತುಂಬಾ ದ.ಸಂ.ಸ ಚಳುವಳಿ ನಡೆಸಿ ತಮ್ಮ ಚಳುವಳಿಯನ್ನು ಗದಗನಲ್ಲಿ ಮಹಾಪರಿನಿಬ್ಬಣ ಹೊಂದಿದ್ದಾರೆ. ಕಾರಣ, ಪ್ರೊ. ಬಿ. ಕೃಷ್ಣಪ್ಪನವರ ಸ್ಮರಣಾರ್ಥವಾಗಿ ಗದಗ ನಗರದದಲ್ಲಿ ಸಭಾಭವನ ನಿರ್ಮಿಸಬೇಕೆಂದು ಸಚಿವರಲ್ಲಿ ಮನವಿ ಸಲ್ಲಿಸಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ನಾಗರಾಜ್ ಗೋಕಾವಿ, ಯುವರಾಜ್ ಬಳ್ಳಾರಿ, ಹೊನ್ನಪ್ಪ ಸಾಕಿ, ಲಕ್ಷ್ಮಣ ಭಜಂತ್ರಿ, ಮುತ್ತಪ್ಪ ಭಜಂತ್ರಿ, ಮುತ್ತು ಚವಡಣ್ಣವರ, ಮಾರುತಿ ಅಂಗಡಿ, ಕುಮಾರ ಕಮತರ, ಅರುಣ ಹಿರೇಮಠ, ಯಮನೂರ ಇರಕಲ್ಲ, ಯಲ್ಲಪ್ಪ ಭಜಂತ್ರಿ, ಕೆಂಚಪ್ಪ ಮ್ಯಾಗೇರಿ, ಪ್ರಕಾಶ್ ಕಮಡೊಳ್ಳಿ, ಲಕ್ಷ್ಮಣ ವಡ್ಡರಕಲ್ಲ, ಸತೀಶ್ ಗುರಿಕಾರ್, ರಾಮಣ್ಣ ಕ್ಯಾಡದ ಇನ್ನಿತರರು ಉಪಸ್ಥಿತರಿದ್ದರು.

# ಭಾರೀ ಗಾಳಿ-ಮಳೆಗೆ ಧರೆಗುರುಳಿದ ವಿದ್ಯುತ್ ಕಂಬ, ಮರ!

■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಸೋಮವಾರ ಸುರಿದ ಭಾರೀ ಗಾಳಿ-ಮಳೆಗೆ ವಿದ್ಯುತ್ ಕಂಬ ಹಾಗೂ ಮರವೊಂದು ಧರೆಗುರುಳಿದೆ. ಗದಗ ನಗರದ ಖಾನತೋಟ ಬಡಾವಣೆಯಲ್ಲಿ ಈ ಘಟನೆ ಜರುಗಿದೆ. ಕಳೆದ ಕೆಲ ದಿನದಿಂದ ಸುರಿದ ಮಳೆಯಿಂದಾಗಿ ಮರದ ಬೇರು ಶಿಥಿಲಗೊಂಡಿತ್ತು. ಆದ್ರೆ ರಾತ್ರಿ ಬೀಸಿದ ಗಾಳಿಯಿಂದಾಗಿ ಬೃಹತ್ ಗಾತ್ರದ ಮರ ರಸ್ತೆಗೆ ಉರುಳಿದೆ.



ಮರದ ಪಕ್ಕದಲ್ಲೇ ಇದ್ದ ವಿದ್ಯುತ್ ಕಂಬ ಬಾಗಿದಕ್ಕೆ ಆತಂಕ ಮನೆ ಮಾಡಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಘಟನೆ ಪರಿಣಾಮ ಖಾನತೋಟ ಬಡಾವಣೆಯಲ್ಲಿ ವಿದ್ಯುತ್ ಸ್ಥಗಿತವಾಗಿದೆ ಎನ್ನಲಾಗಿದೆ.

# ದುಷ್ಕರ್ಮಿಗಳಿಂದ ಯುವಕರ ಮೇಲೆ ತಲವಾರು ದಾಳಿ, ಒಬ್ಬ ಸಾವು

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಇತ್ತಿಚೆಗಷ್ಟೆ ಕೋಮು ಘಟನೆಗೆ ನಲುಗಿ ಹೋಗಿದ್ದ ದಕ್ಷಿಣ ಕನ್ನಡದಲ್ಲಿ ಮಂಗಳವಾರ ಅಪರಾಹ್ನ ಮತ್ತೊಂದು ಯುವಕನ ಕೊಲೆ ನಡೆದಿದ್ದು, ನಾಗರಿಕರನ್ನು ಆತಂಕ ಮೂಡಿಸಿದೆ. ಜಿಲ್ಲೆಯ ಬಂಟ್ವಾಳ ಬಳಿಯ ಕೊಲ್ತಮಜಲು ಎಂಬಲ್ಲಿ ದುಷ್ಕರ್ಮಿಗಳ ತಂಡವೊಂದು ಪಿಕ್‌ಅಪ್ ವಾಹನದಲ್ಲಿದ್ದ ಇಬ್ಬರ ಮೇಲೆ ತಲವಾರು ದಾಳಿ ನಡಸಿದ್ದು, ಈ ವೇಳೆ ಒಬ್ಬ ಯುವಕ ಮೃತಪಟ್ಟಿದ್ದು, ಮತ್ತೊಬ್ಬರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

# ಶಾಸಕರಾದ ಎಸ್.ಟಿ ಸೋಮಶೇಖರ್, ಶಿವರಾಂ ಹೆಬ್ಬಾರ್ ಬಿಜೆಪಿಯಿಂದ ಉಚ್ಚಾಟನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಿರಿಯ ಶಾಸಕರಾದ ಶಿವರಾಮ್ ಹೆಬ್ಬಾರ್ ಮತ್ತು ಎಸ್.ಟಿ ಸೋಮಶೇಖರ್ ಅವರನ್ನು ಬಿಜೆಪಿಯಿಂದ ಆರು ವರ್ಷಗಳ ಕಾಲ ಉಚ್ಚಾಟಿಸಲಾಗಿದೆ.

ಪಕ್ಷದ ಕೇಂದ್ರ ಶಿಸ್ತು ಸಮಿತಿ ಕಳೆದ ಮಾರ್ಚ್ 25ರಂದು ನೀಡಲಾದ ಶೋಕಾಸ್ ನೋಟಿಸ್‌ಗೆ ಈ ಇಬ್ಬರು ಶಾಸಕರು ನೀಡಿರುವ ಉತ್ತರ ತೃಪ್ತಿಕರವಾಗಿಲ್ಲ ಮತ್ತು ಪಕ್ಷದ ಶಿಸ್ತನ್ನು ಪದೇ ಪದೇ ಉಲ್ಲಂಘಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪಕ್ಷದ ಕೇಂದ್ರ ಶಿಸ್ತು ಸಮಿತಿ ಉಚ್ಚಾಟನಾ ಪತ್ರದಲ್ಲಿ ಉಲ್ಲೇಖಿಸಿದೆ.

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಶಾಸಕರಾಗಿರುವ ಶಿವರಾಮ ಹೆಬ್ಬಾರ್ ಮತ್ತು ಯಶವಂತಪುರ ಶಾಸಕ ಎಸ್.ಟಿ.ಸೋಮಶೇಖರ್ ಅವರನ್ನು ಪಕ್ಷದ ಪಕ್ಷ ವಿರೋಧಿ ಚಟುವಟಿಕೆಯ ಹಿನ್ನೆಲೆಯಲ್ಲಿ ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಲಾಗಿದೆ" ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾಧ್ಯಮದವರಿಗೆ ಮಾಹಿತಿ ನೀಡಿದ್ದಾರೆ.

ಎಸ್.ಟಿ ಸೋಮಶೇಖರ್



ಮತ್ತು ಶಿವರಾಬ್ ಹೆಬ್ಬಾರ್ ಏನು ಮಾಡಿದ್ದಾರೆ ಎಂಬುವುದು ಅವರಿಗೆ ಗೊತ್ತಿದೆ. ನಮ್ಮ ಕೇಂದ್ರದ ನಾಯಕತ್ವಕ್ಕೂ ಗೊತ್ತಿದೆ. ಇದರ ಬಗ್ಗೆ ಡಿ.ಕೆ ಶಿವಕುಮಾರ್ ಅವರು ನೋವು ಪಡುವ ಅಗತ್ಯ ಇಲ್ಲ. ಇದು ನಮ್ಮ ಪಕ್ಷದ ತೀರ್ಮಾನ ಎಂದಿದ್ದಾರೆ.

ಸೆಲ್ಕೋ ಫೌಂಡೇಷನ್ ವತಿಯಿಂದ ವಿಶೇಷಚೇತನರಿಗಾಗಿ ಜಿಲ್ಲಾ ಮಟ್ಟದ ಸೌರ ಸ್ವ-ಉದ್ಯೋಗ ಮೇಳ

# ವಿಶೇಷಚೇತನರು ಕೈಕಟ್ಟಿ ಕುಳಿತಿಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ಭೂಮಿಯ ಮೇಲೆ ಜನಿಸಿರುವ ಮಾನವರ ಪೈಕಿ ಹಲವರು ಅಂಗವಿಕಲತೆಯಿಂದ ಬಳಲುತ್ತಿದ್ದಾರೆ. ಹಾಗೆಂದು ಅವರೆಲ್ಲರೂ ಕೈಕಟ್ಟಿ ಕುಳಿತಿಲ್ಲ. ಇತ್ತೀಚಿನ ಆಧುನಿಕ ಯುಗದಲ್ಲಿ ಹಲವಾರು ಕ್ಷೇತ್ರಗಳಲ್ಲಿ ತಮ್ಮದೇ ಆದ ವಿಶೇಷ, ವಿಭಿನ್ನ, ವಿಶಿಷ್ಟ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಚಾರವಾಗಿದೆ. ಸರ್ಕಾರದಿಂದ ಬರುವ ಎಲ್ಲಾ ಅನುದಾನಗಳನ್ನು ಬಳಸಿಕೊಂಡು ಬೆಳೆಯುತ್ತಿದ್ದಾರೆ ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ಮಹಾಂತೇಶ್ ಕೆ. ಹೇಳಿದರು.

ನಗರದ ಕೆ.ಎಚ್. ಪಾಟೀಲ್ ಸಭಾಭವನದಲ್ಲಿ ಸೇಲ್ಕೊ ಫೌಂಡೇಷನ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕೌಶಲ್ಯಾಭಿವೃದ್ಧಿ ಇಲಾಖೆ, ಬರ್ಡ್ಸ್, ದೀನಬಂಧು ಸೇರಿದಂತೆ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ನಡೆದ ಜಿಲ್ಲಾ ಮಟ್ಟದ ವಿಶೇಷಚೇತನರ ಸೌರ ಸ್ವ-ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸೌರ ಸ್ವ-ಉದ್ಯೋಗ ಮೇಳಕ್ಕೆ ನಮ್ಮ ಇಲಾಖೆಯಿಂದ ಎಲ್ಲ ರೀತಿಯ ಸಹಾಯ, ಸಹಕಾರ ಮಾಡುತ್ತೇವೆ. ವಿಶೇಷಚೇತನರು ಸಮಾಜದಲ್ಲಿ ಎಲ್ಲರಂತೆ ಬದುಕಬೇಕು ಎನ್ನುವ ಹಂಬಲದಲ್ಲಿ ಇರುತ್ತಾರೆ. ಆದರೆ, ಅವರಿಗೆ ಆರ್ಥಿಕ ಸಮಸ್ಯೆ ಸೇರಿದಂತೆ ವಿವಿಧ ಸಮಸ್ಯೆಗಳು ಕಾಡುತ್ತಿರುತ್ತವೆ. ಅಂತವರನ್ನು ಗುರುತಿಸಿ ಸಹಕಾರ ನೀಡಿ ಸ್ವಯಂ ಉದ್ಯೋಗಿಗಳಾಗುವಂತೆ ಪ್ರೇರೇಪಿಸುತ್ತೇವೆ ಎಂದು ಭರವಸೆ ನೀಡಿದರು. ಪ್ರಕಾಶ್ ಮೇಟಿ ಮಾತನಾಡಿ, ವಿಶೇಷಚೇತನರ ಸೌರ ಸ್ವ-ಉದ್ಯೋಗ ಮೇಳವನ್ನು ದೇಶಾದ್ಯಂತ ಮಾಡಲಾಗುತ್ತಿದೆ. ಈಗಾಗಲೇ ಹಲವಾರು ವಿಶೇಷಚೇತನರು ಇದರ ಸದುಪಯೋಗ ಪಡೆದುಕೊಂಡು ಉದ್ಯೋಗ ನಡೆಸುತ್ತಿದ್ದಾರೆ. ಗದಗ ಜಿಲ್ಲೆಯಾದ್ಯಂತ ಸದ್ಯ 10 ವಿಶೇಷಚೇತನರು ಉದ್ಯೋಗ ಮಾಡುತ್ತಿದ್ದು, ಪ್ರಸಕ್ತ ವರ್ಷದಲ್ಲಿ 1500 ಉದ್ಯೋಗ ಸೃಷ್ಟಿಸುವ ಗುರಿ ಹೊಂದಲಾಗಿದೆ. ಈ ಕಾರ್ಯಕ್ರಮಕ್ಕೆ ಜಿಲ್ಲೆಯಾದ್ಯಂತ 450ಕ್ಕೂ ಹೆಚ್ಚು ಅಂಗವಿಕಲರು ಭಾಗವಹಿಸಿದ್ದಾರೆ. ಅವರೆಲ್ಲರ ಉದ್ಯೋಗಕ್ಕೆ ಬೆನ್ನೆಲುಬಾಗಿ ನಾವು ಸದಾ ನಿಲ್ಲುತ್ತೇವೆ ಎಂದರು.

ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಅಂಗವಿಕಲರಿಗೆ ಜಿಲ್ಲಾಡಳಿತದಿಂದ ಅನೇಕ ಸೌಲಭ್ಯಗಳನ್ನು ಒದಗಿಸಲಾಗಿದೆ. ಎಲ್ಲವನ್ನೂ ಸದುಪಯೋಗಪಡಿಸಿಕೊಂಡು ಸಮಾಜದಲ್ಲಿ ಎಲ್ಲರಂತೆ ಅವರು ಬದುಕಬೇಕು. ಸೌರ ಸ್ವ ಉದ್ಯೋಗ ಮೇಳವನ್ನು ಗದಗ ನಗರದಲ್ಲಿ ಆಯೋಜನೆ ಮಾಡಿದ್ದು, ಅತ್ಯಂತ ಖುಷಿಯ ವಿಚಾರವಾಗಿದೆ ಎಂದರು.

ಈ ವೇಳೆ ಮಾಂತೇಶ ಅಗಸಿಮುಂದಿನ, ದೀನಬಂಧು ಸಂಸ್ಥಾಪಕ ಹರ್ಷ ಮೊಳೆಕರ, ವೀರೇಂದ್ರ ಸಿಂಗ್, ಎಸ್.ಎಫ್. ದ್ಯಾವನಗೌಡ್ರ, ಈರಯ್ಯ ಹೀರೇಮಠ, ಬಸವರಾಜ ನರೇಗಲ್, ಶೋಭಾ ಸಾಲಿಮಠ, ವರದಾ ಕುಲಕರ, ಶಶಿಧರ್ ಪಾಟೀಲ, ವೀರೇಶ್ ತಡಹಾಳ, ಸನಂದನ್ ಕುಲಕರ್ಣಿ, ಮಮತಾ ನಾಯ್ಡು, ಸಿದ್ದನಗೌಡ ಪಾಟೀಲ, ವಿಶ್ವನಾಥ ಜಮಾದಾರ್ ಮುಂತಾದವರು ಉಪಸ್ಥಿತರಿದ್ದರು.

> ಮೇಳದಲ್ಲಿ ಸೋಲಾರ್ ಆಧರಿತ ವ್ಯವಸಾಯ ಯಂತ್ರಗಳು, ಪಶು ಸಂಗೋಪನಾ ಯಂತ್ರಗಳು, ಕಿರು ಉದ್ಯಮದ ಯಂತ್ರಗಳು, ಆಹಾರ ಉತ್ಪನ್ನ ಯಂತ್ರಗಳು, ರೊಟ್ಟಿ ತಯಾರಿಸುವ ಯಂತ್ರ, ರಾಠಿ ಯಂತ್ರಗಳು, ಹಪ್ಪಳ ತಯಾರಿಸುವ ಯಂತ್ರಗಳು ಸೇರಿದಂತೆ ವಿವಿಧ ಮಳಿಗೆಗಳು ನೋಡುಗರ ಗಮನ ಸೆಳೆದವು.


ಕರ್ನಾಟಕ ಸರ್ಕಾರ

**ರಾಷ್ಟ್ರೀಯ ಆಯುಷ್ ಅಭಿಯಾನ**

**ಜಿಲ್ಲಾ ಆಯುಷ್ ಅಧಿಕಾರಿಗಳ ಕಾರ್ಯಾಲಯ, ಗದಗ**

ಸಂ:ಜಿಆಅಕಾಗ/ಗದಗ/ಕಛೇರಿ/ರಾಆಅ/ಹೊ.ಮಾ.ಸ.ಟೆ/ /2024-25 ದಿನಾಂಕ: 22.05.2025

(ದ್ವಿ-ಲಕೋಟೆ ಪದ್ಧತಿಯಲ್ಲಿ)

**E-Procurement Tender Information**

**50 ಹಾಸಿಗೆಗಳ ಆಯುಷ್ ಸಂಯುಕ್ತ ಆಸ್ಪತ್ರೆ ಮಲ್ಲಸಮುದ್ರ, ಗದಗ ಇಲ್ಲಿಗೆ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಕಾರ್ಯನಿರ್ವಹಿಸಲು ವಿವಿಧ ವೃಂದಗಳ ಹೊರಗುತ್ತಿಗೆ ಸಿಬ್ಬಂದಿಗಳ ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸಲು ಏಜೆನ್ಸಿಯ ಮುಖಾಂತರ ಪಡೆಯುವ ಬಗ್ಗೆ.**

(1) ಟೆಂಡರ್ ಪ್ರಕಟಣೆ ದಿನಾಂಕ : ಸಂ:ಜಿಆಅಕಾಗ/ಗದಗ/ಕಛೇರಿ/ರಾಆಅ/ಹೊ.ಮಾ.ಸ.ಟೆ/ /2024-25, ದಿನಾಂಕ : 22.05.2025 (2) ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಪ್ರಾರಂಭಿಸುವ ದಿನಾಂಕ : **22.05.2025** (3) ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ : **16.06.2025** ಸಂಜೆ 5:30 ರವರೆಗೆ (5) ತಾಂತ್ರಿಕ ಲಕೋಟೆ ತೆರೆಯುವ ಸ್ಥಳ, ವೇಳೆ ಮತ್ತು ದಿನಾಂಕ : **18.06.2025** ಬೆಳಿಗ್ಗೆ 11:00 ಗಂಟೆಗೆ ಸ್ಥಳ : ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ, ಸರ್ಕಾರಿ ಆಯುರ್ವೇದ ಆಸ್ಪತ್ರೆ ಆವರಣ-ಬೆಟಗೇರಿ-582102 ಗದಗ ಜಿಲ್ಲೆ. (6) ಹಣಕಾಸಿನ ಲಕೋಟೆಯನ್ನು ತೆರೆಯುವ ಸ್ಥಳ, ವೇಳೆ ಮತ್ತು ದಿನಾಂಕ : **20.06.2025** ಬೆಳಿಗ್ಗೆ 11:00 ಗಂಟೆಗೆ ಸ್ಥಳ: ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ, ಸರ್ಕಾರಿ ಆಯುರ್ವೇದ ಆಸ್ಪತ್ರೆ ಆವರಣ-ಬೆಟಗೇರಿ-582102 ಗದಗ ಜಿಲ್ಲೆ. (7) ಟೆಂಡರ್‌ನೊಂದಿಗೆ ಪಾವತಿಸಬೇಕಾದ ಇ.ಎಂ.ಡಿ ಮೊತ್ತ ರೂ. **90,703.00** (8) ಟೆಂಡರ್‌ನ ಒಟ್ಟು ಮೊತ್ತ ರೂ. **45,35,136.00** (9) ವ್ಯವಹರಿಸಬೇಕಾದ ಅಧಿಕಾರಿ ಹಾಗೂ ವಿಳಾಸ, ದೂರವಾಣಿ ಸಂಖ್ಯೆ ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ, ಸರ್ಕಾರಿ ಆಯುರ್ವೇದ ಆಸ್ಪತ್ರೆ ಆವರಣ-ಬೆಟಗೇರಿ-582102 ಗದಗ ಜಿಲ್ಲೆ.

ಆಸಕ್ತಿ ಹೊಂದಿರುವ ಬಿಡ್‌ದಾರರು ಮಾಹಿತಿಯನ್ನು https://kppp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿದೆ.

ಸಹಿ/- ಜಿಲ್ಲಾ ಆಯುಷ್ ಅಧಿಕಾರಿಗಳು, ಜಿಲ್ಲಾ ಆಯುಷ್ ಕಛೇರಿ ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/78/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka